ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 206
Volume - 01 Issue - 206
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269
Title- Code: KARKAN 28269
ಚಿತ್ರದುರ್ಗ
Chitradurga
ದಿನಾಂಕ: 02–03–2024 ಶನಿವಾರ
Date: 02-03-2024 Saturday
ಪುಟ: 4
Page: 4
ಬೆಲೆ : ರೂ.2–00
Price: Rs. 2-00



ಒಳಪುಟದ ಸುದ್ದಿಗಳು
ಪ್ರತಿ ಕೆಜಿ ಅಕ್ಕಿಗೆ ಕಮೀಷನ್ ಮೊತ್ತ ರೂ.1.50 ಹೆಚ್ಚಳ: ಸಿಎಂ ಸಿದ್ದರಾಮಯ್ಯ 2
ಮದುವೆಯಾಗುವ ಆಮಿಷವೊಡ್ಡಿ ಗರ್ಭಿಣಿಯಾದ ಕೂಡಲೇ ಕೈಕೊಟ್ಟ ಯುವಕ 3
ಒಣಬೇಸಾಯ ಕೃಷಿ ಸಂಶೋಧನಾ ಕೇಂದ್ರಕ್ಕೆ ಅಧಿವೇಶನದಲ್ಲಿ ಒತ್ತಾಯ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಬೆಂಗಳೂರಿನ ರಾಮೇಶ್ವರ ಕಫೆಯಲ್ಲಿ ಸ್ಫೋಟ

## ತನಿಖೆ ತೀವ್ರವಾಗಿ ನಡೆಯುತ್ತಿದೆ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಖಚಿತ: ಮುಖ್ಯಮಂತ್ರಿ ಸಿದ್ದರಾಮಯ್ಯ






» **ಮೈಸೂರು**

ಬೆಂಗಳೂರಿನ ರಾಮೇಶ್ವರ ಕಫೆಯಲ್ಲಿ ನಡೆದಿರುವ ಸ್ಫೋಟ ಘಟನೆಯ ತನಿಖೆ ತೀವ್ರವಾಗಿ ನಡೆಯುತ್ತಿದೆ. ತಪ್ಪಿತಸ್ಥರ ವಿರುದ್ಧ ಖಚಿತವಾಗಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಮೈಸೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಪ್ರಾಥಮಿಕ ತನಿಖೆಯ ಪ್ರಕಾರ ಅದು ಸಣ್ಣ ಪ್ರಮಾಣದ ಸುಧಾರಿತ ಸ್ಫೋಟಕವಾಗಿತ್ತು ಎಂದು ತಿಳಿದುಬಂದಿದೆ, ಪೂರ್ಣ ವರದಿಗಾಗಿ ಕಾಯುತ್ತಿದ್ದೇನೆ ಎಂದು ತಿಳಿಸಿದರು. ಕ್ಯಾಶಿಯರ್ ಬಳಿ ಟೋಕನ್ ಪಡೆದು ಅಲ್ಲಿ ತಿಂಡಿ ತಿಂದಿರುವ ವ್ಯಕ್ತಿ, ಬ್ಯಾಗ್ ಇಟ್ಟು ಬಂದಿದ್ದಾನೆ ಎಂಬ ಮಾಹಿತಿ ದೊರೆತಿದೆ ಎಂದರು. ಸುಮಾರು ಎಂಟು ಜನರಿಗೆ ಗಾಯಗಳಾಗಿವೆ. ಎಲ್ಲರೂ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಸಿಸಿ ಟಿವಿ ಕ್ಯಾಮರಾ ಪರೀಕ್ಷಿಸಲಾಗುತ್ತಿದೆ. ಈ ಬಗ್ಗೆ ತನಿಖೆ ನಡೆಯುತ್ತಿದ್ದು ಗೃಹ ಸಚಿವರಿಗೆ ಸ್ಥಳಕ್ಕೆ ಭೇಟಿ ನೀಡುವಂತೆ ತಿಳಿಸಲಾಗಿದೆ. ಇನ್ನು ಸ್ವಲ್ಪ ಹೊತ್ತಿನಲ್ಲಿಯೇ ಸ್ಪಷ್ಟ ಮಾಹಿತಿ ದೊರೆಯಲಿದೆ ಎಂದರು.






**ಕಠಿಣ ಕ್ರಮ:** ರಾಜ್ಯದಲ್ಲಿ ಇಂಥದ್ದು ನಡೆಯಬಾರದಿತ್ತು. ಮಂಗಳೂರಿನಲ್ಲಿ ಆಗಿದ್ದು ಬಿಟ್ಟರೆ ಪುನ: ಇಂಥ ಘಟನೆ ಸಂಭವಿಸಿದೆ. ಯಾರು ಇದನ್ನು ಮಾಡಿದ್ದಾರೆ ಎಂದು ಪತ್ತೆ ಹಚ್ಚಿ ಅವರ ಮೇಲೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.

**ರಾಜಕಾರಣ ಮಾಡಬಾರದು:** ವಿರೋಧ ಪಕ್ಷಗಳು ಈ ವಿಷಯಗಳ ಬಗ್ಗೆ ರಾಜಕಾರಣ ಮಾಡಬಾರದು. ಎಲ್ಲರೂ ಸಹಕರಿಸಬೇಕು ಎಂದರು. ಪೋಲಿಸರೊಂದಿಗೆ ಮಾತನಾಡಿದ್ದು, ಸದ್ಯದಲ್ಲಿಯೇ ಪೂರ್ಣ ಚಿತ್ರಣ ಸಿಗಲಿದೆ. ವಿಚಾರಣೆ ತ್ವರಿತಗತಿಯಲ್ಲಿ ನಡೆದಿದೆ ಎಂದರು ಹೇಳಿದರು.

**ದೇಶದಲ್ಲಿ ಶೇ 5 ರಷ್ಟು ಮಾತ್ರ ಬಡತನ:ಪರಿಶೀಲನೆ ಅಗತ್ಯ:** ನೀತಿ ಆಯೋಗದವರು ನೀಡಿರುವ ವರದಿ ಪ್ರಕಾರ ಕಳೆದ 10 ವರ್ಷಗಳಲ್ಲಿ ಬಡತನ ಶೇ 5ರಷ್ಟು ಮಾತ್ರ ಇದೆ ಎಂದು ಹೇಳಲಾಗಿದೆ ಎಂಬ ಪ್ರಶ್ನೆಗೆ ಉತ್ತರಿಸಿ ಅದನ್ನು ಪರಿಶೀಲಿಸಬೇಕಿದೆ. ಅದು ಸಮೀಕ್ಷೆಯ ವರದಿಯಲ್ಲ. ಅವರು ಹೇಳಿರುವುದು ಸತ್ಯವೋ ಅಸತ್ಯವೋ ಎಂದು ತಿಳಿಯಬೇಕಿದೆ. ಬಡತನ 5% ಕಡಿಮೆಯಾಗಿದ್ದರೆ ಅದು ಖುಷಿ ಪಡುವ ವಿಚಾರ. ಪರಿಸ್ಥಿತಿ ನೋಡಿದರೆ ಆ ರೀತಿ ಕಾಣುವುದಿಲ್ಲ. ಬಡತನ ರೇಖೆಗಿಂತ ಕೆಳಗಿರುವ 82 ಕೋಟಿ ಕುಟುಂಬಗಳಿಗೆ ಅಕ್ಕಿ ಕೊಡಲಾಗುತ್ತಿದೆ ಎಂದರು.

**ಬಿಜೆಪಿ 50 ಕೋಟಿ ಆಮಿಷ ಒಡ್ಡುತ್ತಿದೆ :ನಮ್ಮ ಶಾಸಕರು ಆಮಿಷಕ್ಕೆ ಬಲಿಯಾಗುವುದಿಲ್ಲ:** ಕಾಂಗ್ರೆಸ್ ಆಡಳಿತವಿರುವ ಹಿಮಾಚಲ ಪ್ರದೇಶವನ್ನು ಬಿಜೆಪಿ ಗುರಿಯಾಗಿಸಿಕೊಂಡಿದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿ ಬಿಜೆಪಿ ಎಂದಿಗೂ ಜನರ ಆಶೀರ್ವಾದ ಪಡೆದು ಅಧಿಕಾರಕ್ಕೆ ಬಂದೇ ಇಲ್ಲ. ಆಪರೇಷನ್ ಕಮಲ ಮಾಡಿಯೇ ಬಂದಿದ್ದಾರೆ. 113 ಕ್ಕಿಂತ ಹೆಚ್ಚು ಗೆದ್ದೇ ಇಲ್ಲ. 2018 ರಲ್ಲಿ 100 ಗೆದ್ದಿದ್ದರು. ಕರ್ನಾಟಕದಲ್ಲಿಯೂ ಆಪರೇಷನ್ ಕಮಲ ಪ್ರಯತ್ನ ಮಾಡುತ್ತಾರೆ. ಆದರೆ ನಮ್ಮ ಶಾಸಕರು ಅವರ ಆಸೆ ಆಮಿಷಗಳಿಗೆ ಬಲಿಯಾಗುವುದಿಲ್ಲ. ಅವರು ಈಗ 50 ಕೋಟಿ ಆಮಿಷವೊಡ್ಡುತ್ತಿದ್ದಾರೆ ಎಂದು ತಿಳಿಸಿದರು.

**ಫಾಸ್ಟ್ ನ್ಯೂಸ್**

## ಚಳ್ಳಕೆರೆಯಲ್ಲಿ 700 ಮನೆ ಲೋಕಾರ್ಪಣೆ

» **ಚಿತ್ರದುರ್ಗ**

ವಸತಿ ಇಲಾಖೆ, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ಪ್ರಧಾನಮಂತ್ರಿ ಆವಾಸ್ ಯೋಜನೆ 'ಸರ್ವರಿಗೂ ಸೂರು' ಯೋಜನೆಯಡಿ ರಾಜ್ಯದಾದ್ಯಂತ ಪೂರ್ಣಗೊಂಡಿರುವ 36789 ಮನೆಗಳ ಲೋಕಾರ್ಪಣೆ ಹಾಗೂ ಮನೆ ಹಂಚಿಕೆ, ಹಕ್ಕುಪತ್ರಗಳ ವಿತರಣಾ ಸಮಾರಂಭ ಇದೇ ಮಾರ್ಚ್ 02 ರಂದು ಬೆಳಿಗ್ಗೆ 10.30ಕ್ಕೆ ಬೆಂಗಳೂರು ಕೆ.ಆರ್.ಪುರಂ ನಗರೇಶ್ವರ ನಾಗೇನಹಳ್ಳಿಯಲ್ಲಿ ನಡೆಯಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವರ್ಚುಯಲ್ ಮುಖಾಂತರ ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ನಗರ ವ್ಯಾಪ್ತಿಯ 700 ಮನೆಗಳ ಲೋಕಾರ್ಪಣೆಯನ್ನು ಕೂಡ ಇದೇ ಸಂದರ್ಭದಲ್ಲಿ ಮಾಡುವರು. ಚಳ್ಳಕೆರೆ ನಗರದ ಅಂಬೇಡ್ಕರ್ ನಗರದಲ್ಲಿ ಮನೆಗಳ ಲೋಕಾರ್ಪಣೆ, ಮನೆ ಹಂಚಿಕೆ, ಹಕ್ಕುಪತ್ರಗಳ ವಿತರಣಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಬೆಂಗಳೂರಿನಲ್ಲಿ ಜರುಗುವ ಸಮಾರಂಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಸತಿ ಸಚಿವ ಬಿ.ಜೆಡ್.ಜಮೀರ್ ಅಹಮದ್ ಖಾನ್, ಮುಂತಾದವರು ಘನ ಉಪಸ್ಥಿತಿ ವಹಿಸುವರು. ಚಳ್ಳಕೆರೆಯಲ್ಲಿ ವರ್ಚುಯಲ್ ಮೂಲಕ ಜರುಗುವ ಕಾರ್ಯಕ್ರಮದಲ್ಲಿ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವರು ಹಾಗೂ ಸಂಸದ ಎ.ನಾರಾಯಣಸ್ವಾಮಿ, ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಪ್ರಸಾದ್ ಅಬ್ಬಯ್ಯ, ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಚಳ್ಳಕರೆ ಶಾಸಕ ಟಿ.ರಘುಮೂರ್ತಿ, ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್, ಡಾ.ವೈ.ಎ.ನಾರಾಯಣಸ್ವಾಮಿ, ಚಿದಾನಂದ ಎಂ.ಗೌಡ, ನಗರಸಭೆ ಸದಸ್ಯರು ಸೇರಿದಂತೆ ವಿವಿಧ ಗಣ್ಯರು ಮನೆ ಹಂಚಿಕೆ, ಹಕ್ಕುಪತ್ರಗಳ ವಿತರಣೆ ಕಾರ್ಯಕ್ರಮದಲ್ಲಿ ಭಾಗವಹಿಸುವರು ಎಂದು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಚಿತ್ರದುರ್ಗ ವಿಭಾಗದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಕೃಷ್ಣಾರೆಡ್ಡಿ ತಿಳಿಸಿದ್ದಾರೆ.

## ಇಷ್ಟಪಟ್ಟು ತಿನ್ನುತ್ತಿದ್ದ ಎಗ್ ಬಜ್ಜಿ ಪ್ರಾಣನೇ ತೆಗೆಯಿತು

» **ತೆಲಂಗಾಣ**

ಕೆಲವೊಮ್ಮೆ ನಾವು ಇಷ್ಟಪಟ್ಟು ತಿನ್ನುವ ತಿಂಡಿಯೇ ನಮ್ಮ ಜೀವ ತೆಗೆದರೆ, ಅದಕ್ಕಿಂದ ದುರ್ಗತಿ ಮತ್ತೊಂದಿಲ್ಲ. ತೆಲಂಗಾಣದಲ್ಲಿ ಇಂಥದ್ದೇ ಒಂದು ಘಟನೆ ನಡೆದಿದ್ದು, ತುಂಬಾಣಟಿಜಜಜಿಟಿಜಜ ಇಷ್ಟಪಟ್ಟು ತಿನ್ನುತ್ತಿದ್ದ ಎಗ್ ಬಜ್ಜಿ, ಗಂಟಲಿಗೆ ಸಿಕ್ಕಿಹಾಕಿಕೊಂಡು, ವ್ಯಕ್ತಿಯೋರ್ವ ಸಾವನ್ನಪ್ಪಿರುವ ಘಟನೆ ನಡೆದಿದೆ.ವನಪರ್ತಿ ಜಿಲ್ಲೆಯಲ್ಲಿ ಈ ಘಟನೆ ನಡೆದಿದ್ದು, ವ್ಯಕ್ತಿಯೋರ್ವ ಬಜ್ಜಿ ಅಂಗಡಿ ಎದುರು ಪತ್ನಿಯೊಂದಿಗೆ ಎಗ್ ಬಜ್ಜಿ ತಿನ್ನುತ್ತ ಕುಳಿತಿದ್ದ. ಇದ್ದಕ್ಕಿದ್ದಂತೆ ಆತನಿಗೆ ಎಗ್ ಬಜ್ಜಿ ಗಂಟಲಿಗೆ ಸಿಕ್ಕಿಹಾಕಿಕೊಂಡು, ಉಸಿರಾಟಕ್ಕೆ ತೊಂದರೆಯಾಗಿದೆ. ಪತ್ನಿ ಎಷ್ಟೇ ಪ್ರಯತ್ನಿಸಿದರೂ, ಆ ಬಜ್ಜಿ ಹೊರತೆಗೆಯಲಾಗಲಿಲ್ಲ. ಹಲವು ಪ್ರಯತ್ನ ಮಾಡಿದರೂ, ಆತ ಉಸಿರಾಡಲಾಗದೇ, ಕಷ್ಟಪಡುತ್ತಿದ್ದ. ಅಲ್ಲಿದ್ದ ಕೆಲವರು, ಸಾಕಷ್ಟು ಪ್ರಯತ್ನಿಸಿ, ಆ ವ್ಯಕ್ತಿಯ ಗಂಟಲಿನಲ್ಲಿ ಸಿಕ್ಕಿ ಹಾಕಿಕೊಂಡಿರುವ ಬಜ್ಜಿ ತೆಗೆದಿದ್ದಾರೆ. ಆದರೆ ಅಷ್ಟೊತ್ತಿಗಾಗಲೇ, ಆ ವ್ಯಕ್ತಿ ಸಾವನ್ನಪ್ಪಿದ್ದಾನೆ. ಈ ಮೂಲಕ ಸಾವು ಬರುವುದಿದ್ದರೆ, ಹೇಗೂ ಬರುತ್ತದೆ ಅನ್ನೋದು ಮತ್ತೊಮ್ಮೆ ಸಾಬೀತಾಗಿದೆ.

ಕೆಲ ವರ್ಷಗಳ ಹಿಂದೆ ಶಿಕ್ಷಕಿಯೊಬ್ಬಳು ಶಾಲೆಯಲ್ಲಿ ಪೂಜೆ ಬಳಿಕ ಪ್ರಸಾದ ಸೇವಿಸಿದಾಗ, ತೆಂಗಿನ ಕಾಯಿಯ ಗೆರಟೆ ಪೀಸ್ ಗಂಟಲಿಗೆ ಸಿಕ್ಕಿಹಾಕಿಕೊಂಡು ಸಾವನ್ನಪ್ಪಿದ್ದಳು. ಕಾಪಾಡಬೇಕಿದ್ದ ಪ್ರಸಾದ ಸೇವನೆಯೇ ಆಕೆಯ ಪ್ರಾಣ ತೆಗೆದಿತ್ತು.

## ಕಡುಬಡತನದಲ್ಲಿ ಬೆಳದು ನಿಂತ ಪ್ರತಿಭೆ ಟಿ.ಸುಮಾ

**ಚಿತ್ರದುರ್ಗ:** ಕಡುಬಡತನದಲ್ಲಿ ಬೆಳದು ನಿಂತ ಪ್ರತಿಭೆ ಟಿ.ಸುಮಾ ಎಂದು ನಿವೃತ್ತ ಸರ್ಕಾರಿ ಅಭಿಯೋಜಕ ಮತ್ತು ವಕೀಲರಾದ ಜಯರಾಂ ತಿಳಿಸಿದರು.ನಗರದ ಜೋಗಿಮಟ್ಟಿ ರಸ್ತೆಯಲ್ಲಿರುವ ಅವರ ಕಛೇರಿಯಲ್ಲಿ ನೂತವಾಗಿ ನ್ಯಾಯಾದೀಶೆಯಾಗಿ ಆಯ್ಕೆ ಯಾಗಿರುವ ಟಿ.ಸುಮಾರವರಿಗೆ ಗೌರವಸಲ್ಲಿಸಿ ಮಾತನಾಡಿ ಇತ್ತೀಚಿನ ದಿನಗಳಲ್ಲಿ ಬಡಕುಟುಂಬದ ಹಿನ್ನೆಲೆಯಲ್ಲಿ ಬೆಳೆದು ಬಂದ ಪ್ರತಿಭೆಗಳ ಸಂಖ್ಯೆ ಹೆಚ್ಚಾಗುತ್ತಿರುವುದು ಸಂತಸ ತಂದಿದೆ. ಚಿತ್ರದುರ್ಗ ಕೋ9 ಬಹು ಸಂಖ್ಯೆಯ ವಕೀಲರ ದೊಡ್ಡ ಗುಂಪು ನೋಡಬಹುದು ಈ ಮಧ್ಯೆ ಬಡ ಆಟೋ ಡ್ರೈವರ್ ಮಗಳು ನ್ಯಾಯಾಂಗ ವ್ಯವಸ್ಥೆಯ ಅತ್ಯುನ್ನತ ಹುದ್ದೆ ಅಲಂಕರಿಸಿರುವುದು ತುಂಬಾ ಸಂತೋಷ ತಂದಿದೆ ಎಂದರು.


ಪುಟ ↘ 2




## ಲೋಕಸಭಾ ಚುನಾವಣಾ ಅಭ್ಯರ್ಥಿಗಳ ಆಯ್ಕೆಯಲ್ಲಿ ಯಾವುದೇ ಗೊಂದಲವಿಲ್ಲ: ಸಿದ್ದರಾಮಯ್ಯ

**ಹಾಸನ:** ಲೋಕಸಭೆ ಚುನಾವಣೆ ಅಭ್ಯರ್ಥಿಗಳ ಆಯ್ಕೆಯನ್ನು ತಕ್ಷಣದಲ್ಲಿ ಮಾಡಲಾಗುವುದು. ಎಲ್ಲರೂ ಒಗ್ಗಟ್ಟಾಗಿರುವುದರಿಂದ ಅಭ್ಯರ್ಥಿಗಳ ಆಯ್ಕೆಯಲ್ಲಿ ಯಾವುದೇ ಗೊಂದಲವಿರುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.ಅವರು ಇಂದು ಹಾಸನದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ಪಾಕಿಸ್ತಾನ ಪರ ಘೋಷಣೆ ಪ್ರಕರಣ ಸಂಬಂಧಿಸಿದಂತೆ ಎಫ್ ಎಸ್ ಎಲ್ ವರದಿ ಬೇಗ ಬಹಿರಂಗಪಡಿಸಬೇಕು ಎಂದು ವಿರೋಧಪಕ್ಷದ ನಾಯಕ ಅಶೋಕ್ ಒತ್ತಾಯಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ವರದಿ ಬಂದ ತಕ್ಷಣ ತಬಹಿರಂಗ ಮಾಡುತ್ತೇವೆ.

**ಪ್ರಮುಖ ಸುದ್ದಿ**

# ಯಾವುದೇ ಸರ್ಕಾರವಿರಲಿ ಕಿವಿ ಹಿಂಡಿ ಕೆಲಸ ಮಾಡಿಸುವ ಶಕ್ತಿ ತರಳಬಾಳು ಶ್ರೀಗಳಿಗೆ ಇದೆ: ಶಾಸಕ ಚಂದ್ರಪ್ಪ

» **ಹೊಳಲ್ಕೆರೆ**

ರಾಜ್ಯದಲ್ಲಿ ಯಾವುದೇ ಸರ್ಕಾರವಿರಲಿ. ಯಾರೆ ಮುಖ್ಯಮಂತ್ರಿಯಾಗಿರಲಿ ಕಿವಿ ಹಿಂಡಿ ಕೆಲಸ ಮಾಡಿಸುವ ಶಕ್ತಿ ಸಿರಿಗೆರೆಯ ತರಳಬಾಳು ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮೀಜಿಗಳಿಗಿದೆ ಎಂದು ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪ ಹೇಳಿದರು.

ಭರಮಸಾಗರ ಹೋಬಳಿಯ ಹುಲ್ಲೇಹಾಳ್ ಬಸ್ತಿಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಮಾಧ್ಯಮ ಮತ್ತು ಆಂಗ್ಲ ಮಾಧ್ಯಮ ಶಾಲೆಯ 2023–24 ನೇ ಸಾಲಿನ ಡಿ.ಎಂ.ಎಫ್. ಅನುದಾನದಲ್ಲಿ ನಿರ್ಮಾಣ ಮಾಡಲಾದ ಶಾಲಾ ಕೊಠಡಿಗಳ ಉದ್ಘಾಟನೆ ಹಾಗೂ ಶತಮಾನೋತ್ಸವ ಮತ್ತು ವಾರ್ಷಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.




ಸಮಾಜದ ಏಳಿಗೆಗಾಗಿ ಹಗಲು ರಾತ್ರಿ ಶ್ರಮಿಸುತ್ತಿರುವ ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳು ಜಗಳೂರು, ಭರಮಸಾಗರ, ಆನಗೋಡು, ಅಣಜಿ, ಚನ್ನಗಿರಿ, ಬೇಲೂರು, ಹಳೆಬೀಡು ಭಾಗದಲ್ಲಿ ಕೆರೆಗಳಿಗೆ ನೀರು ತುಂಬಿಸಲು ಸರ್ಕಾರದಿಂದ ಕೋಟ್ಯಾಂತರ ರೂ. ಗಳನ್ನು ಮಂಜೂರು ಮಾಡಿಸಿದ್ದಾರೆ. ಶೈಕ್ಷಣಿಕ ವರ್ಷ ಮುಗಿಯುವುದರೊಳಗೆ ಈ ಶಾಲೆಗೆ ಮತ್ತೊಂದು ಹೊಸ ಬಸ್ ಕೊಡುತ್ತೇನೆ. ವಿದ್ಯಾರ್ಥಿಗಳ ಹಾಜರಾತಿ ನೋಡಿಕೊಂಡು ಇನ್ನು ಕೊಠಡಿಗಳನ್ನು ಕಟ್ಟಿಸಿಕೊಡುತ್ತೇನೆಂದು ಭರವಸೆ ಕೊಟ್ಟರು. ಒಂದೆ ಸೂರಿನಡಿ ಎಂಟು ಶಾಲೆಗಳನ್ನು ಏಕ ಕಾಲದಲ್ಲಿ ಕಟ್ಟಿರುವುದು ಗ್ರಾಮೀಣ ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗಲಿದೆ. ಗಡಿ ಭಾಗದ ಹಳ್ಳಿಗಳಲ್ಲಿ ಶಾಲೆಗಳನ್ನು ಕಟ್ಟಿಸಿದ್ದೇನೆ. ರಾಜ್ಯದಲ್ಲಿ ಯಾವ ಶಾಸಕರು ಸರ್ಕಾರಿ ಶಾಲೆಗಳಿಗೆ ಬಸ್ ವ್ಯವಸ್ಥೆ ಕಲ್ಪಿಸಿಲ್ಲ. ನನ್ನ ಕ್ಷೇತ್ರದಲ್ಲಿ ಸರ್ಕಾರಿ ಶಾಲೆಗಳನ್ನು ಗುರುತಿಸಿ ಸ್ವಂತ ಖರ್ಚಿನಿಂದ ಬಸ್ ಸಂಚಾರ ಆರಂಭಿಸಿದ್ದೇನೆ. ಡ್ರೈವರ್ ಮತ್ತು ಕಂಡಕ್ಟರ್‌ಗೆ ಸಂಬಳ ಹಾಗೂ ಡೀಸೆಲ್ ಕೂಡ ಹಾಕಿಸುತ್ತೇನೆ. ಡಾ.ಶಿವಮೂರ್ತಿ ಶಿವಾಚಾರ್ಯ ಸ್ವಾಮಿಗಳು 300 ಶಾಲೆಗಳನ್ನು ಕಟ್ಟಿಸಿ ಲಕ್ಷೋಪ ಲಕ್ಷ ಸಂಖ್ಯೆಯಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಣ ಸಿಗುವಂತೆ ಮಾಡಿದ್ದಾರೆ.

## ಫಾಸ್ಟ್ ನ್ಯೂಸ್

### ಕಡುಬಡತನದಲ್ಲಿ ಬೆಳದು ನಿಂತ ಪ್ರತಿಭೆ ಟಿ.ಸುಮಾ

» ಮೊದಲ ಪುಟದಿಂದ

ಅನ್ಯಾಕ್ಕೊಳಗಾದವರಿಗೆ ನ್ಯಾಯ ನೀಡುವ ಕಾರ್ಯದಲ್ಲಿ ಎಂದು ಲೋಪವಾಗದಂತೆ ನ್ಯಾಯಾಂಗದ ದಾರಿಯಲ್ಲಿ ಉನ್ನತ ಹುದ್ದೆ ಅಲಂಕರಿಸಿ ಕೋಟೆನಾಡಿಗೆ ಕೀರ್ತಿ ತರುವಂತೆ ನೂತನ ನ್ಯಾಯಾದೀಶೆ ಟಿ.ಸುಮಾಗೆ ಕಿವಿ ಮಾತು ಹೇಳಿದರು. ಈ ಸಂದರ್ಭದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ಬಿ.ದಿನೇಶ್ ಗೌಡಗೆರೆ, ನ್ಯಾವಾದಿಗಳಾದ ಮಹಂತೇಶ್,ನರಸಿಂಹ,ಪಾಪಣ್ಣ, ಕೃಷ್ಣಮೂರ್ತಿ ಮುಖ್ಯ ಪೇದೆ ಹೇಮಣ್ಣ ಇದ್ದರು.
ಭಾರತದ ಪರವಾಗಿ ಇಲ್ಲದಿರುವವರು ಘೋಷಣೆ ಕೂಗಿದ್ದು ನಿಜವಾಗಿದ್ದರೆ ಅವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು..ದೇಶಭಕ್ತಿಯನ್ನು ಬಿಜೆಪಿಯವರು ಕಾಂಗ್ರೆಸ್ ಗೆ ಹೇಳಿಕೊಡುವ ಅಗತ್ಯವಿಲ್ಲ. ದೇಶದ ಸ್ವಾತಂತ್ರ್ಯಕ್ಕೆ ಹೋರಾಡಿದ್ದು ಕಾಂಗ್ರೆಸ್ ಹೊರತು ಬಿಜೆಪಿಯಲ್ಲ ಎಂದರು.

### ಲೋಕಸಭಾ ಚುನಾವಣಾ ಅಭ್ಯರ್ಥಿಗಳ ಆಯ್ಕೆಯಲ್ಲಿ ಯಾವುದೇ ಗೊಂದಲವಿಲ್ಲ: ಸಿದ್ದರಾಮಯ್ಯ

» ಮೊದಲ ಪುಟದಿಂದ

**ಜಾತಿಗಣತಿ ವರದಿ ಬಗ್ಗೆ ಸಚಿವಸಂಪುಟದಲ್ಲಿ ಚರ್ಚೆ:** ಕಾಂತರಾಜು ವರದಿಯನ್ನು ಕೆಲವು ಸ್ವಾಮೀಜಿಗಳು ಹಾಗೂ ಪಕ್ಷದ ಕೆಲ ನಾಯಕರೇ ವಿರೋಧಿಸುತ್ತಿರುವ ಬಗ್ಗೆ ಉತ್ತರಿಸಿ, ಜಾತಿಗಣತಿ ವರದಿಯನ್ನು ಸ್ವೀಕರಿಸಲಾಗಿದೆ. ಆದರೆ ವರದಿಯಲ್ಲಿರುವ ಅಂಶಗಳ ಬಗ್ಗೆ ಮಾಹಿತಿಯಿಲ್ಲ. ಸದರಿ ವರದಿಯನ್ನು ಸಚಿವಸಂಪುಟದ ಮುಂದೆ ಇರಿಸಿ ಚರ್ಚಿಸಲಾಗುವುದು ಎಂದರು. ಎಲ್ಲರ ಅಭಿಪ್ರಾಯವನ್ನು ಪಡೆದೇ ವರದಿಯನ್ನು ಸಿದ್ಧಪಡಿಸಲಾಗಿದೆ ಎಂದು ತಿಳಿಸಿದ್ದಾರೆ, ಆದರೆ ಈ ಬಗ್ಗೆ ಸರಿಯಾದ ಮಾಹಿತಿ ಇಲ್ಲ ಎಂದರು.
**ಜಾತ್ಯಾತೀತ ಜೆಡಿಎಸ್ ಕೋಮುವಾದಿ ಪಕ್ಷದೊಂದಿಗೆ ಮೈತ್ರಿ:** ವಿರೋಧಪಕ್ಷದವರು ಅಧಿವೇಶನವನ್ನು ಬಹಿಷ್ಕರಿಸಿ ರಾಜ್ಯಪಾಲರನ್ನು ಭೇಟಿಯಾಗಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಬಿಜೆಪಿಯವರು ರಾಜಕೀಯ ಮಾಡುತ್ತಿದ್ದಾರೆ. ಇತ್ತೀಚೆಗೆ ನಡೆದ ರಾಜ್ಯಸಭಾ ಚುನಾವಣೆಯಲ್ಲಿ ಬಿಜೆಪಿಯವರು ಒಬ್ಬರು ಕಾಂಗ್ರೆಸ್ ಪಕ್ಷಕ್ಕೆ ಮತಹಾಕಿ , ಮತ್ತೊಬ್ಬರು ಗೈರಾಗಿದ್ದರು. ಇದನ್ನು ಮುಚ್ಚಿಹಾಕಲು ಈ ರೀತಿ ಮಾಡುತ್ತಿದ್ದಾರೆ. ಪಕ್ಷವು ಮಾಡಿಕೊಂಡಿರುವ ಮೈತ್ರಿಯನ್ನು ಶಾಸಕರೇ ಒಪ್ಪಿರುವುದಿಲ್ಲ. ಜೆಡಿಎಸ್ ಅವರು ಜಾತ್ಯಾತೀತರಾಗಿದ್ದು, ಕೋಮುವಾದಿಗಳೊಂದಿಗೆ ಮೈತ್ರಿ ಮಾಡಿಕೊಳ್ಳುವುದಿಲ್ಲ ಎಂದಿದ್ದರು ಎಂದು ತಿಳಿಸಿದರು. ಅಭಿವೃದ್ಧಿ ಕಾರ್ಯಕ್ರಮಗಳ ಉದ್ಘಾಟನೆಯಲ್ಲಿ ಸಿಎಂ ರಾಜಕೀಯ ಭಾಷಣ ಮಾಡುತ್ತಾರೆ ಎಂಬ ಪ್ರತಿಪಕ್ಷಗಳ ಮಾತಿಗೆ ಪ್ರತಿಕ್ರಿಯೆ ನೀಡಿ, ಕಾಂಗ್ರೆಸ್ ಪಕ್ಷ ಪ್ರಾರಂಭಿಸಿದ್ದ ಹಲವು ಕಾರ್ಯಕ್ರಮಗಳನ್ನ ಜೆಡಿಎಸ್ ಹಾಗೂ ಬಿಜೆಪಿಯವರು ಉದ್ಘಾಟನೆ ಮಾಡಿದ್ದಾರೆ. ಸರ್ಕಾರದಲ್ಲಿ ಇದು ನಿರಂತರ ಪ್ರಕ್ರಿಯೆ. ಸರ್ಕಾರಿ ಕಾರ್ಯಕ್ರಮದಲ್ಲಿ ರಾಜಕೀಯ ಭಾಷಣ ಮಾಡುವುದನ್ನು ಪ್ರಧಾನಿ ಮೋದಿಯವರಿಂದಲೇ ಕಲಿತಿದ್ದು. ಅವರು ಸಂಸತ್ ಭವನದಲ್ಲಿ ರಾಜಕೀಯ ಭಾಷಣ ಮಾಡುತ್ತಾರೆ ಎಂದರು.
ಹಾಸನ ಮೇಲ್ಸೇತುವೆ ನಿರ್ಮಾಣಕ್ಕೆ ರಾಜ್ಯ ಸರ್ಕಾರ 48 ಕೋಟಿ ರೂ. ಕೊಟ್ಟಿಲ್ಲ ಎಂದು ಜೆಡಿಎಸ್ ಟೀಕೆಗೆ ಪ್ರತಿಕ್ರಿಯೆ ನೀಡಿ, ಇದಕ್ಕೆ ಅನುದಾನವನ್ನು ಜೆಡಿಎಸ್ ಅವರಲ್ಲ, ನಮ್ಮ ಸರ್ಕಾರವೇ ನೀಡುತ್ತದೆ ಎಂದರು. ಹಾಸನ ವಾರ್ತಾ ಇಲಾಖೆಯ ಕಚೇರಿಯಲ್ಲಿ ಪತ್ರಕರ್ತರನ್ನ ಕರೆದೊಯ್ಯುವ ವಾಹನವಿರದ ಕಾರಣ ತೊಂದರೆಯಾಗಿರುವ ಬಗ್ಗೆ ಪತ್ರಕರ್ತರು ತಿಳಿಸಿದ್ದಕ್ಕೆ , ವಾರ್ತಾ ಇಲಾಖೆಯ ಅಧಿಕಾರಿಗಳೊಂದಿಗೆ ಈ ಬಗ್ಗೆ ಮಾತನಾಡುವುದಾಗಿ ತಿಳಿಸಿದರು.

### ದ್ವಿತೀಯ ಪಿಯು ಪರೀಕ್ಷೆ: 564 ವಿದ್ಯಾರ್ಥಿಗಳು ಗೈರು

» ಚಿತ್ರದುರ್ಗ

ಮಾರ್ಚ್ 01 ರಂದು ನಡೆದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಕನ್ನಡ ವಿಷಯದ ಪರೀಕ್ಷೆಗೆ 564 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಕನ್ನಡ ವಿಷಯದಲ್ಲಿ 13840 ವಿದ್ಯಾರ್ಥಿಗಳು ನೋಂದಣಿಯಾಗಿದ್ದು, 13276 ಹಾಜರಾಗಿ, 564 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಜಿಲ್ಲೆಯ 24 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಿತು. ಜಿಲ್ಲೆಯಲ್ಲಿ ಯಾವುದೇ ಡಿಬಾರ್ ಪ್ರಕರಣ ಇರುವುದಿಲ್ಲ. ಮಾರ್ಚ್ 02 ಮತ್ತು 03ರಂದು ಯಾವುದೇ ಪರೀಕ್ಷೆ ಇರುವುದಿಲ್ಲ. ಮಾರ್ಚ್ 04ರಂದು ಗಣಿತ ಮತ್ತು ಶಿಕ್ಷಣ ಶಾಸ್ತ್ರ ವಿಷಯದ ಪರೀಕ್ಷೆ ಇರುತ್ತದೆ ಎಂದು ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪನಿರ್ದೇಶರು ತಿಳಿಸಿದ್ದಾರೆ.

### ಹೊಟ್ಟೆನೋವು: ಗೃಹಿಣಿ ಆತ್ಮಹತ್ಯೆಗೆ ಶರಣು

» ಚಳ್ಳಕೆರೆ

ತಾಲ್ಲೂಕಿನ ತಳಕು ಪೊಲೀಸ್ ಠಾಣಾ ವ್ಯಾಪ್ತಿಯ ಹೊನ್ನೂರುಗ್ರಾಮದಶಿವಮ್ಮಎಂಬುವವರುದೂರು ನೀಡಿ, ನನ್ನ ಎರಡನೇ ಮಗಳು ವಿ.ರೇಖಳಾನ್ನು ಗೊರ್ಲಕಟ್ಟೆಯ ಬೀರೇಶ್ ಎಂಬುವವರಿಗೆ ಮದುವೆ ಮಾಡಿಕೊಟ್ಟಿದ್ದು, 2ನೇ ಮಗು ಜನಿಸಿದ ನಂತರ ಆಕೆಗೆ ಹೊಟ್ಟೆನೋವು ಕಾಣಿಸಿಕೊಂಡಿತ್ತು. ವೈದ್ಯರಲ್ಲಿ ಪರೀಕ್ಷೆ ನಡೆಸಿದರೂ ಗುಣವಾಗದ ಕಾರಣ ಮನ ನೊಂದು ಆಕೆ ಗೊರ್ಲಕಟ್ಟೆಯ ಬಾಡಿಗೆಮನೆಯಲ್ಲಿ ನೇಣುಹಾಕಿಕೊಂಡು ಮೃತಪಟ್ಟಿದ್ದಾಳೆ.

# ಪ್ರತಿ ಕೆಜಿ ಅಕ್ಕಿಗೆ ಕಮೀಷನ್ ಮೊತ್ತ ರೂ.1.50 ಹೆಚ್ಚಳ: ಸಿಎಂ ಸಿದ್ದರಾಮಯ್ಯ

» ಬೆಂಗಳೂರು





ನರೇಂದ್ರ ಮೋದಿಯವರು ಗುಜರಾತ್ ಮುಖ್ಯಮಂತ್ರಿಯಾಗಿ ಆಹಾರ ಭದ್ರತೆ ಮತ್ತು ನರೇಗಾ ಕಾರ್ಯಕ್ರಮಗಳನ್ನು ವಿರೋಧಿಸಿದ್ದರು. ಇವು ಕಾಂಗ್ರೆಸ್ ಜಾರಿಗೆ ತಂದಿದ್ದ ಹಸಿವು ಮುಕ್ತ ಭಾರತದ ಕಾರ್ಯಕ್ರಮಗಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು. ಇದೇ ಸಂದರ್ಭದಲ್ಲಿ ಪಡಿತರ ವಿತರಕರಿಗೆ ಪ್ರತಿ ಕೆಜಿ ಅಕ್ಕಿಗೆ ಕಮಿಷನ್ ಮೊತ್ತ ಒಂದೂವರೆ ರೂಪಾಯಿಗೆ ಹೆಚ್ಚಳ ಮಾಡುವುದಾಗಿ ಘೋಷಣೆ ಮಾಡಿದರು.

ಅರಮನೆ ಮೈದಾನದಲ್ಲಿ ನಡೆದ ಅನ್ನಭಾಗ್ಯ ದಶಮಾನೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಬಿಜೆಪಿ ಕಾಂಗ್ರೆಸ್ ಮುಕ್ತ ಭಾರತ ಎನ್ನುತ್ತದೆ, ಆದರೆ ಕಾಂಗ್ರೆಸ್ ಹಸಿವು ಮುಕ್ತ ನಾಡನ್ನು, ಹಸಿವು ಮುಕ್ತ ದೇಶವನ್ನು ನಿರ್ಮಿಸಲು ಹೊರಟಿದೆ ಎಂದರು.

ಅನ್ನಭಾಗ್ಯ ಸೇರಿ ಬಡವರು, ಮಧ್ಯಮ ವರ್ಗದವರಿಗೆ ಕೊಟ್ಟ ಭಾಗ್ಯಗಳನ್ನು ಆಡಿಕೊಂಡಿದ್ದ ಬಿಜೆಪಿ ಅಧಿಕಾರಕ್ಕೆ ಬಂದಿದ್ದು ದುರಂತ. ಇಂಥಾ ತಪ್ಪುಗಳನ್ನು ಮತ್ತೆ ಮತ್ತೆ ಮಾಡಬೇಡಿ, ಅನ್ನದಾತರು ದುಡಿದರೆ ದೇಶ ಬದುಕುತ್ತದೆ ಎಂದರು.

ನಾವು ತಲಾ 10 ಕೆಜಿ ಅಕ್ಕಿ ಕೊಡಲು ತೀರ್ಮಾನ ಮಾಡಿ ಪ್ರತಿ ಕೆಜಿಗೆ 34 ರೂಪಾಯಿ ಕೊಡ್ತೀವಿ ಅಕ್ಕಿ ಕೊಡಿ ಎಂದು ಕೇಂದ್ರಕ್ಕೆ ಕೇಳಿದೆವು. ಆದರೂ ನರೇಂದ್ರ ಮೋದಿ ಮತ್ತು ಕೇಂದ್ರದ ಬಿಜೆಪಿ ಸರ್ಕಾರ ಕರ್ನಾಟಕದ ಜನತೆಗೆ ಅಕ್ಕಿ ಕೊಡಲಿಲ್ಲ.

ಬಿಜೆಪಿ ಬಡವರ, ದುಡಿಯುವವರ, ಶ್ರಮಿಕರ ಪರವಾಗಿ ಇದ್ದಿದ್ದರೆ, ಈ ನಾಡಿನ ದಲಿತರು, ಶೂದ್ರರು ಮತ್ತು ಹಿಂದುಳಿದವರ ಪರವಾಗಿ ಇದ್ದಿದ್ದರೆ ಅಕ್ಕಿ ಕೊಡುತ್ತಿತ್ತು. ಮೋದಿಗೆ, ಕೇಂದ್ರದ ಬಿಜೆಪಿ ಸರ್ಕಾರಕ್ಕೆ ಹಸಿವು ಮುಕ್ತ ದೇಶ ಬೇಕಾಗಿಲ್ಲ. ಆದ್ದರಿಂದ ನಿಜವಾಗೂ ನಿಮ್ಮ ಪರವಾಗಿ ಇರುವವರು ಯಾರು ಎನ್ನುವುದನ್ನು ಅರ್ಥ ಮಾಡಿಕೊಳ್ಳಿ. ನಿಮ್ಮ ಹೃದಯದ ಮಾತು ಕೇಳಿ ಮತ ಚಲಾಯಿಸಿ ಎಂದು ಮುಖ್ಯಮಂತ್ರಿಗಳು ಕರೆ ನೀಡಿದರು.

–ಹಸಿವಿನಜೊತೆಗೆದೇಶವನ್ನುಅನಕ್ಷರತೆ, ಅನಾರೋಗ್ಯ ಮತ್ತು ನಿರುದ್ಯೋಗ ಮುಕ್ತ ಮಾಡುವುದೇ ನಮ್ಮ ಕಾಂಗ್ರೆಸ್ ಪಕ್ಷದ ಗುರಿ. ನಮ್ಮ ಹಿಂದಿನ ಸರ್ಕಾರದ ಕಾಲದಲ್ಲಿ ಜಾರಿಗೆ ತಂದಿದ್ದ ಅನ್ನಭಾಗ್ಯ, ಕ್ಷೀರಭಾಗ್ಯ ಕ್ಷೀರಧಾರೆ, ಕೃಷಿಭಾಗ್ಯ, ಪಶುಭಾಗ್ಯ ವಿದ್ಯಾಸಿರಿ, ಇಂದಿರಾಕ್ಯಾಂಟೀನ್ ಕಾರ್ಯಕ್ರಮಗಳೆಲ್ಲವೂ ಈ ಗುರಿಯೆಡೆಗೆ ಕರ್ನಾಟಕವನ್ನು ಕೊಂಡೊಯ್ಯುವ ಪ್ರಯತ್ನದಲ್ಲಿ ಯಶಸ್ವಿ ಆಗಿದ್ದೇವೆ ಎಂದರು.

–ನಮ್ಮ ಈಗಿನ ಸರ್ಕಾರದ ಗ್ಯಾರಂಟಿ ಯೋಜನೆಗಳ ಗುರಿ ಕೂಡಾ ರಾಜ್ಯವನ್ನು ಹಸಿವು,ಅನಾರೋಗ್ಯ, ಅನಕ್ಷರತೆ, ನಿರುದ್ಯೋಗ ಮುಕ್ತ ಮಾಡುವುದೇ ಆಗಿದೆ.

ಬಸವಣ್ಣನ ಕಾಯಕ–ದಾಸೋಹದ ಪರಿಕಲ್ಪನೆ ಅನ್ನಭಾಗ್ಯಕ್ಕೆ ಪ್ರೇರಣೆ

– ನಮ್ಮ ಯೋಜನೆಗಳಲ್ಲಿ ರಾಜಕೀಯ ಲಾಭದ ಉದ್ದೇಶ ಇಲ್ಲ, ನಮ್ಮ ಯೋಜನೆಗಳ ಉದ್ದೇಶ ಸಂಪತ್ತು, ಅಧಿಕಾರ ಮತ್ತು ಅವಕಾಶಗಳ ಸಮಾನ ಹಂಚಿಕೆ. ರಾಜ್ಯದ ಯಾವುದೇ ಮನೆಯಲ್ಲಿ ಹಸಿವು, ಅನಾರೋಗ್ಯ, ಅನಕ್ಷರತೆ ಮತ್ತು ನಿರುದ್ಯೋಗದಿಂದ ಬಳಲುವರು ಇರದಂತೆ ನೋಡಿಕೊಳ್ಳುವುದೇ ನಮ್ಮ ಆಶಯ ಮತ್ತು ಬದ್ಧತೆ ಎಂದರು.

ನಾನು ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಮರುಗಳಿಗೆಯಲ್ಲಯೇ ಅನ್ನಭಾಗ್ಯ ಕಾರ್ಯಕ್ರಮವನ್ನು ಜಾರಿಗೆ ತಂದೆ. 2013ರ ಬಸವ ಜಯಂತಿಯ ದಿನವೇ ಜಾರಿಗೆ ಬಂದಿರುವ ಅನ್ನಭಾಗ್ಯ ಯೋಜನೆ ಬಸವಣ್ಣನವರ ದಾಸೋಹದಿಂದ ಪ್ರೇರಿತವಾಗಿರುವುದು ಎಂದು ನೆನಪಿಸಿದರು.

**ಕಮಿಷನ್ ಮೊತ್ತ ಹೆಚ್ಚಳ:** ಪಡಿತರ ವಿತರಕರಿಗೆ ಪ್ರತಿ ಕೆಜಿ ಅಕ್ಕಿಗೆ ಕಮಿಷನ್ ಮೊತ್ತ ಒಂದೂವರೆ ರೂಪಾಯಿಗೆ ಹೆಚ್ಚಳಗೊಳಿಸಿ ಮುಖ್ಯಮಂತ್ರಿಗಳು ಮಹತ್ವದ ಘೋಷಣೆ ಮಾಡಿದರು.

ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ, ಕಿಯೋನಿಕ್ಸ್ ಅಧ್ಯಕ್ಷ ಶರತ್ ಬಚ್ಚೇಗೌಡ ಸೇರಿ ಹಲವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಶ್ರೀ ಅನ್ನದಾನೇಶ್ವರ ಮಠದಲ್ಲಿ 266ನೇ ಶಿವಾನುಭವ ಸಂಪದ.

## ಉಚಿತ ಆಕ್ಸಿಜನ್ ಕೊಡುವ ಗಿಡಮರಗಳನ್ನು ಬೆಳೆಸಿ

» ದಾವಣಗೆರೆ



ಪರಿಸರ ಅಂದಾಕ್ಷಣ ನೆನಪಾಗುವುದು ಬರೀ ಗುಡ್ಡ– ಬೆಟ್ಟ, ಅಲ್ಲಿರುವ ಗಿಡ– ಮರಗಳು ಅಷ್ಟೇ ಅಲ್ಲ ನಮ್ಮ ಸುತ್ತಲೂ ಇರುವ ವಿವಿಧ ಕ್ಷೇತ್ರಗಳ ವಾತಾವರಣವು ಚೆನ್ನಾಗಿರಬೇಕು ಎಂದು ಯುವ ವಿಜ್ಞಾನಿ, ದಾವಣಗೆರೆ ವಿಶ್ವವಿದ್ಯಾಲಯದ ಪರಿಸರ ಮತ್ತು ವಿಜ್ಞಾನ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ವೀರೇಶ್ ಎಸ್. ಜೆ. ಅವರು ನುಡಿದರು.

ಅವರು ದೇವರಾಜ ಅರಸು ಬಡಾವಣೆಯಲ್ಲಿರುವ ಹಾಲಕೆರೆ ಶ್ರೀ ಅನ್ನದಾನೇಶ್ವರ ಮಠದಲ್ಲಿ ಏರ್ಪಡಿಸಿದ್ದ 266ನೇ ಶಿವಾನುಭವ ಸಂಪದದಲ್ಲಿ ಉಪನ್ಯಾಸ ನೀಡುತ್ತಾ ಶಿಕ್ಷಣ ಕ್ಷೇತ್ರ, ಮಠದ ಪರಿಸರ ಮನುಷ್ಯನನ್ನು ಮತ್ತಷ್ಟು ಎತ್ತರಕ್ಕೆ ಬೆಳೆಸುತ್ತದೆ ಎಂದರು.

ಪೊಲೀಸ್ ಠಾಣೆ, ಕೋರ್ಟ್ ಆಸ್ಪತ್ರೆಗಳೂ ಸಹ ಪರಿಸರದ ವ್ಯಾಪ್ತಿಯಲ್ಲಿ ಬರುತ್ತವೆ. ಬರೀ ಪಾಠ ಓದಿದರೆ ಸಾಲದು, ಅದರ ತಿರುಳು ತಿಳಿದುಕೊಂಡು ಜೀವನದಲ್ಲಿ ಅಳವಡಿಸಿಕೊಂಡು ಕೃತಿಯಲ್ಲಿ ಜಾರಿಗೆ ತಂದಾಗ ಮಾತ್ರ ಮನುಷ್ಯರ ಜೀವನ ಸಾರ್ಥಕವಾಗುತ್ತದೆ. ಪರಿಸರಕ್ಕೂ ಬಸವಣ್ಣನವರ ವಚನಗಳಿಗೂ ಸಾಮ್ಯತೆ ಇದೆ ಎಂದು ನುಡಿದು ಪ್ರಕೃತಿಯ ಸೂಕ್ಷ್ಮಾಣು ಜೀವಿಗಳ ಬಗ್ಗೆ ಸದಾ ಜಾಗೃತರಾಗಿರಬೇಕು ಎಂದರು.

ಹಣದಿಂದ ವಸ್ತುಗಳನ್ನು ಖರೀದಿಸಬಹುದು. ಆದರೆ ಪರಿಸರದಲ್ಲಿ ಗಿಡಮರಗಳು ಕೊಡುವ ಆಕ್ಸಿಜನ್ ನಿಂದ ಸಮಾಜ ಆರೋಗ್ಯವಾಗಿರುತ್ತದೆ, ಪ್ಲಾಸ್ಟಿಕ್ ನಂತಹ ವಿಷದ ವಸ್ತುಗಳನ್ನು ಬೆಂಕಿಯಲ್ಲಿ ಸುಡಬೇಡಿ. ಅದರಿಂದ ಕ್ಯಾನ್ಸರ್ ರೋಗ ಉಲ್ಬಣವಾಗುತ್ತದೆ, ಆಗ ಆಸ್ಪತ್ರೆಗೆ ಹೋಗಿ ಆಕ್ಸಿಜನ್ ಖರೀದಿಸುತ್ತೇವೆ. ಇದರ ಅವಶ್ಯಕತೆ ಇದೆಯೇ ಎಂದು ಪ್ರಶ್ನಿಸಿ ನಮ್ಮ ಆರೋಗ್ಯ ನಮ್ಮ ಕೈಯಲ್ಲಿರಬೇಕು ಎಂದರು.

ಸುಸ್ಥಿರ ಪರಿಸರ ಅಭಿವೃದ್ಧಿಗೆ ಹೆಚ್ಚು ಒತ್ತು ಕೊಡಬೇಕು. ಸೂರ್ಯನ ಕಿರಣಗಳು ಕೇವಲ 2 ರಷ್ಟು ಮಾತ್ರ ಭೂಮಿಗೆ ಬರುತ್ತದೆ. ಇದು ಹೆಚ್ಚಾದರೆ, ಸಾವು– ನೋವುಗಳು ಹೆಚ್ಚಾಗುತ್ತವೆ. ಸೂರ್ಯನು ಸುತ್ತಲೂ ಇರುವ ಓಝೋನ್ ಪದರ ಕೆಲಸ ಮಾಡದಿದ್ದರೆ,ಲೋಕ ಅಲ್ಲೋಲ ಕಲ್ಲೋಲವಾಗುತ್ತದೆ, ಆದ್ದರಿಂದ ಮನುಷ್ಯರಾದ ನಾವು ವಾಯುಮಾಲಿನ್ಯವನ್ನು ತಡೆಯಬೇಕು. ಹೆಚ್ಚು ಗಿಡಗಳನ್ನು ನೆಡುವುದರ ಮೂಲಕ ಪರಿಸರದ ಬಗ್ಗೆ ಸದಾ ಜಾಗೃತರಾಗಿರಬೇಕೆಂದು ಕರೆ ನೀಡಿದರು.

ದಿವ್ಯ ಸಾನಿಧ್ಯ ವಹಿಸಿದ್ದ ಹಾಲಕೆರೆ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠದ ಜಗದ್ಗುರು ಶ್ರೀ ಮ.ನಿ.ಪ್ರ. ಮುಪ್ಪಿನ ಬಸವಲಿಂಗ ಮಹಾ ಸ್ವಾಮಿಗಳವರುಆಶೀರ್ವಚನನೀಡುತ್ತಅನುರೇಣು ತೃಣಕಾಷ್ಟ, ಎಂಬಂತೆ ಎಲ್ಲದರಲ್ಲಿಯೂ ಶಿವನ ಅನುಭವ ಹೊಂದಬೇಕು. ಪರಿಸರ ಮತ್ತು ವಿಜ್ಞಾನದ ತಿಳುವಳಿಕೆ ಅರಿತಿರಬೇಕು. ಒತ್ತಡದ ಜೀವನ ಶೈಲಿಯಲ್ಲಿಯೂ ಮನುಷ್ಯ ಪರಿಸರಕ್ಕೆ ಹೆಚ್ಚು ಕಾಳಜಿ ತೋರಿಸಬೇಕೆಂದರು.

ಲಿಂ. ಶ್ರೀಮತಿ ಗೌರಮ್ಮ ಲಿಂ.ಕೆ. ತಿಪ್ಪಣ್ಣನವರ ಸ್ಮರಣಾರ್ಥ ಅವರ ಪುತ್ರ ಕೆ.ಟಿ. ಮಹಾಲಿಂಗಪ್ಪ ಶ್ರೀಮತಿ ಶೈಲ ಇವರು ಭಕ್ತಿ ಸೇವೆಯನ್ನು ವಹಿಸಿಕೊಂಡಿದ್ದರು.

## ಯಾವುದೇ ಸರ್ಕಾರವಿರಲಿ ಕಿವಿ ಹಿಂಡಿ ಕೆಲಸ ಮಾಡಿಸುವ ಶಕ್ತಿ ತರಳಬಾಳು ಶ್ರೀಗಳಿಗೆ ಇದೆ: ಶಾಸಕ

» ಮೊದಲ ಪುಟದಿಂದ

ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಲಭ್ಯ ಒದಗಿಸಿ ಎಂಟತ್ತು ಕೊಠಡಿಗಳನ್ನು ನಿರ್ಮಿಸಲಾಗಿದೆ. ಒಂದೆ ಶಾಲೆಗೆ 48 ಕೊಠಡಿಗಳನ್ನು ಕಟ್ಟಿಸಿದ್ದೇನೆ. ರೈತರ ಸಮಸ್ಯೆಗಳನ್ನು ಅರ್ಥಮಾಡಿಕೊಂಡಿರುವ ಸ್ವಾಮೀಜಿ ಕೆರೆ ಕಟ್ಟೆಗಳಿಗೆ ನೀರು ತುಂಬಿಸುವ ಕೆಲಸ ಇತಿಹಾಸದಲ್ಲಿಯೇ ಯಾರು ಮಾಡಿಲ್ಲ ಎಂದು ಗುಣಗಾನ ಮಾಡಿದರು.ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಸಿರಿಗೆರೆಯ ತರಳಬಾಳು ಡಾ.ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ ಆಶೀರ್ವಚನ ನೀಡಿ ಮಕ್ಕಳು ಶ್ರದ್ದೆಯಿಂದ ಶಿಕ್ಷಣ ಕಲಿತರೆ ವಿಜ್ಞಾನಿ, ಐ.ಎ.ಎಸ್. ಅಧಿಕಾರಿಯಾಗಬಹುದು. ಕೃಷಿಕರು ಆಗಲಿ ಒಳ್ಳೆಯದು. ಕೃಷಿ ಎಂದರೆ ಕೀಳಲ್ಲ. ಗೌರವಯುತವಾದುದು. ಮಕ್ಕಳ ತಲೆಯಲ್ಲಿ ಒಳ್ಳೆಯ ವಿಚಾರಗಳನ್ನು ತುಂಬಬೇಕು. ಮಕ್ಕಳಲ್ಲಿ ಅದ್ಭುತವಾದ ಪ್ರತಿಭೆಯಿದೆ. ಗುರುತಿಸುವ ಜವಾಬ್ದಾರಿ ಶಿಕ್ಷಕರು ಹಾಗೂ ಪೋಷಕರುಗಳ ಮೇಲಿದೆ. ಮಕ್ಕಳನ್ನು ಅಂಕ ಪಡೆಯುವುದಕ್ಕಷ್ಟೆ ಸೀಮಿತಗೊಳಿಸಬಾರದು. ಪೋಷಕರು ಮಕ್ಕಳನ್ನು ಹಂಗಿಸುವುದು ಸರಿಯಲ್ಲ. ಕೇವಲ ಬುದ್ದಿವಂತರಾದರೆ ಸಾಲದು ನೈತಿಕ ಶಕ್ತಿ ಬೆಳೆಸಿಕೊಳ್ಳಬೇಕೆಂದು ಮಕ್ಕಳಿಗೆ ತಿಳಿಸಿದರು.

ನೂರು ವರ್ಷದಲ್ಲಿ ಈ ಶಾಲೆಯಲ್ಲಿ ಓದಿದ ಮಕ್ಕಳು ಯಾರ್‍ಯಾರು ಏನೇನು ಸಾಧನೆ ಮಾಡಿದ್ದಾರೆನ್ನುವ ಸರ್ವೆ ಆಗಬೇಕು. ಹಿಂದಿನ ಗುರುಗಳ ಅಮೃತ ಹಸ್ತದಿಂದ ಈ ಶಾಲೆ ಸ್ಥಾಪನೆಯಾಗಿದ್ದು, ದೇವಸ್ಥಾನಗಳನ್ನು ಕಟ್ಟಿಸಲಾಗುತ್ತಿದೆಯೇ ವಿನಃ ಕೆರೆ ಕಟ್ಟೆಗಳನ್ನು ಯಾರು ಕಟ್ಟಿಸುತ್ತಿಲ್ಲ. ಕೆರೆಗಳು ಒತ್ತುವರಿಯಾಗುತ್ತಿವೆ. ದೀಪ ಹಚ್ಚುವುದು ಕಷ್ಟ. ಬೆಂಕಿ ಹಚ್ಚುವುದು ಸುಲಭ. ಅದಕ್ಕಾಗಿ ಮಕ್ಕಳಿಂದಲೆ ದೀಪ ಹಚ್ಚಿಸಬೇಕು ಎಂದು ಹೇಳಿದರು. ಮಕ್ಕಳ ಬುದ್ದಿ ವಿಕಸನವಾಗಬೇಕು. ಚಂದ್ರಯಾನ–3 ಉಡಾವಣೆಯಲ್ಲಿ ನಮ್ಮ ಮಠದ ಮೂವರು ವಿಜ್ಞಾನಿಗಳಿರುವುದು ನಿಜಕ್ಕೂ ಸಂತೋಷದ ಸಂಗತಿ. ಥಾಮಸ್ ಆಳ್ವ ಎಡಿಸನ್ ದೊಡ್ಡ ವಿಜ್ಞಾನಿಯಾಗಿ ಬಲ್ಬ್ ಕಂಡು ಹಿಡಿದಿದ್ದನ್ನು ಈ ಸಂದರ್ಭದಲ್ಲಿ ಸ್ವಾಮೀಜಿ ನೆನಪಿಸಿಕೊಂಡರು. ಚಿತ್ರದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶ್ರೀಮತಿ ಅನಿತಾ ನಾಗರಾಜ್, ಉಪಾಧ್ಯಕ್ಷೆ ಶ್ರೀಮತಿ

## ಪ್ರಮುಖ ಸುದ್ದಿ

ರಾಷ್ಟ್ರೀಯ ವಿಜ್ಞಾನ ದಿನಾಚರಣೆ ನಿಮಿತ್ತ ವಿದ್ಯಾರ್ಥಿಗಳಿಂದ ವಸ್ತು ಪ್ರದರ್ಶನದಲ್ಲಿ ಫಣೀಂಧರ್ ಕುಮಾರ್

# ಮಕ್ಕಳು ಮೂಲವಿಜ್ಞಾನದ ಅಧ್ಯಯನದಲ್ಲಿ ತೊಡಗಿ

» ನಾಯಕನಹಟ್ಟಿ



ವಿದ್ಯಾರ್ಥಿಗಳು ಪ್ರಾಥಮಿಕ ಶಿಕ್ಷಣದಿಂದ ಮೂಲ ವಿಜ್ಞಾನದ ಅಧ್ಯಯನದಲ್ಲಿ ತೊಡಗಬೇಕು ಎಂದು ಎಸ್.ಟಿ.ಎಸ್.ಆರ್ ವಿದ್ಯಾಸಂಸ್ಥೆಯ ಶಿಕ್ಷಕ ಎಂ.ಫಣೀಂಧರ್ ಕುಮಾರ್ ಹೇಳಿದರು.

ಪಟ್ಟಣದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶುಕ್ರವಾರ ನಡೆದ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ನಿಮಿತ್ತ ವಿದ್ಯಾರ್ಥಿಗಳಿಂದ ರಚಿತವಾದ ವಿಜ್ಞಾನ ವಸ್ತು ಪ್ರದರ್ಶನ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

ಸಮಾಜದಲ್ಲಿರುವ ಮೌಢ್ಯ ಅಂಧಕಾರವನ್ನು ಅರ್ಥಮಾಡಿಕೊಳ್ಳಲು ಮತ್ತು ಅವುಗಳನ್ನು ವಿನಾಶಮಾಡಲು ವಿಜ್ಞಾನ ಅತ್ಯಂತ ಸಹಕಾರಿಯಾಗಲಿದೆ. ಅದರಲ್ಲೂ ಪ್ರಮುಖವಾಗಿ ಗ್ರಾಮೀಣ ಪ್ರದೇಶದಲ್ಲಿ ಮಾಟ ಮಂತ್ರ ತಂತ್ರ ಎಂಬ ಹಲವು ಮೌಢ್ಯಗಳನ್ನು ಕೆಲ ಪಟ್ಟಭದ್ರರು ಬಿತ್ತುತ್ತಿರುತ್ತಾರೆ. ಅವುಗಳನ್ನೇ ನಂಬಿ ಸಾರ್ವಜನಿಕರು ಮೋಸ ಹೋಗುತ್ತಾರೆ. ಈ ಎಲ್ಲ ಮಾಟಮಂತ್ರ ತಂತ್ರಗಳಲ್ಲಿ ಯಾವುದೇ ಅತಿಮಾನುಷ ಶಕ್ತಿ ಇರುವುದಿಲ್ಲ. ಬದಲಿಗೆ ಶುದ್ಧವಾದ ಮೂಲವಿಜ್ಞಾನದ ಅಂಶಗಳು ಅಡಗಿರುತ್ತವೆ. ಅವುಗಳನ್ನು ಅರ್ಥಮಾಡಿಕೊಳ್ಳಬೇಕಾದರೆ ಮಕ್ಕಳು ಪ್ರಾಥಮಿಕ ಶಿಕ್ಷಣದಿಂದ ಮೂಲ ವಿಜ್ಞಾನದ ಅಧ್ಯಯನದಲ್ಲಿ ತೊಡಗಬೇಕು ಎಂದರು.

ವಿದ್ಯಾರ್ಥಿಗಳುಆರಂಭಿಕಹಂತದಲ್ಲಿಸಣ್ಣ ಸಣ್ಣ ಪ್ರಯೋಗಗಳು ಮತ್ತು ಮಾದರಿಗಳನ್ನು ರಚಿಸಲು ಮುಂದಾಗಬೇಕು. ಆಗ ವಿಜ್ಞಾನದ ಪರಿಚಯವಾಗಿ ವೈಜ್ಞಾನಿಕ ಮನೋಭಾವನೆಗಳನ್ನು ಬೆಳೆಸಿಕೊಳ್ಳಲು ಸಹಕಾರಿಯಾಗುತ್ತದೆ. ಇದರಿಂದ ವೈಜ್ಞಾನಿಕ ಚಿಂತನೆ ಮತ್ತು ವೈಚಾರಿಕ ಸಾಮರ್ಥ್ಯ ಲಭಿಸುತ್ತದೆ. ಆಗ ಮೌಢ್ಯತೆಗಳು, ಕಂದಾಚಾರಗಳು, ಮೂಢನಂಬಿಕೆಗಳ ಹಿಂದೆ ಇರುವ ತರ್ಕ ಅರ್ಥವಾಗಿ ಮೋಸ ಹೋಗುವುದು ತಪ್ಪುತ್ತದೆ. ಹಾಗಾಗಿ ಪ್ರತಿಯೊಬ್ಬ ವಿದ್ಯಾರ್ಥಿಯು ಗಮನವಿಟ್ಟು ವಿಜ್ಞಾನ ತರಗತಿಗಳನ್ನು ಕೇಳಬೇಕು. ಮತ್ತು ಆಸಕ್ತಿವಹಿಸಿ ವಿಜ್ಞಾನ ವಿಷಯವನ್ನು ಕಲಿಯಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.ಪ.ಪಂ.ಸದಸ್ಯ ಸೈಯ□□ಅನ್ವರ್ ಮಾತನಾಡಿ, ಸರ್ಕಾರಿ ಶಾಲೆಯಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳು ಶಿಕ್ಷಕರ ಮಾರ್ಗದರ್ಶನದಲ್ಲಿ ಕಣ್ಮನ ಸೆಳೆಯುವ ವಿಜ್ಞಾನ ಮಾದರಿಗಳನ್ನು ತಯಾರಿಸಿ ಪ್ರದರ್ಶನ ನೀಡುತ್ತಿರುವುದು ತುಂಬಾ ಸಂತಸದ ಸಂಗತಿ. ಹಾಗೇ ಶಾಲಾ ಹಂತದಲ್ಲಿ ಪ್ರತಿ ಮಗುವೂ ಎಲ್ಲ ವಿಷಯಗಳಲ್ಲಿ ತೀವ್ರ ಕುತೂಹಲಿಗಳಾಗಿರಬೇಕು. ಕುತೂಹಲ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ. ಅದರಲ್ಲೂ ವಿಜ್ಞಾನ ಅಧ್ಯಯನ ಕ್ರಮಬದ್ಧ ಮತ್ತು ಶಿಸ್ತು ಕಲಿಕೆಗೆ ಪೂರಕವಾಗಿರುತ್ತದೆ ಎಂದರು.ಈ ಸಂದರ್ಭದಲ್ಲಿ ಶಾಲಾ ಹಿರಿಯ ಮುಖ್ಯಶಿಕ್ಷಕಿ ಎನ್.ಇಂದಿರಮ್ಮ, ಶಿಕ್ಷಕ ತೀರ್ಥಕುಮಾರ್, ಇಸಿಒ ಈರಸ್ವಾಮಿ, ಸಿಆ□□ಪಿ ಈಶ್ವರಪ್ಪ, ಡಾ□□ಬಾಸ್ಕೋ ಶಾಲೆ ಕಾರ್ಯದರ್ಶಿ ಎಸ್.ಟಿ.ಬೋರಸ್ವಾಮಿ ಮಾತನಾಡಿದರು. ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷೆ ಸುಮಲತಾ, ಸದಸ್ಯರಾದ ರಾಜಣ್ಣ, ಸುಮಯ್ಯ, ಅನಿತಾ, ನಾಗರತ್ನಮ್ಮ ಶಿಕ್ಷಕರಾದ ಗಾಯಿತ್ರಮ್ಮ, ಮಂಜುಳಮ್ಮ, ಶಿಲ್ಪ, ಕೃಷ್ಣರೆಡ್ಡಿ, ಮಂಜುನಾಥ್, ಉಷಾ, ಸುಮಾ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ದ್ವಿತೀಯ ಪಿಯು ಪರೀಕ್ಷೆ ಮೊದಲ ದಿನ : 146 ವಿದ್ಯಾರ್ಥಿಗಳು ಗೈರು

» **ಚಳ್ಳಕೆರೆ**

ತಾಲ್ಲೂಕಿನಾದ್ಯಂತ ಒಟ್ಟು ಮೂರು ಪರೀಕ್ಷಾ ಕೇಂದ್ರಗಳಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆ ಆರಂಭವಾಗಿದ್ದು, ಪ್ರತಿಯೊಂದು ಕೇಂದ್ರದಲ್ಲೂ ಪರೀಕ್ಷೆಗಳು ಸುಗಮವಾಗಿ ನಡೆದವು ಎಂದು ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಎಂ.ರವೀಶ್ ತಿಳಿಸಿದರು. ಅವರು, ಈ ಬಗ್ಗೆ ಮಾಹಿತಿ ನೀಡಿ, ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಒಟ್ಟು 1418 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಬೇಕಿದ್ದು, 1359 ವಿದ್ಯಾರ್ಥಿಗಳು ಹಾಜರಾಗಿ, 64 ವಿದ್ಯಾರ್ಥಿಗಳು ಗೈರಾಗಿರುತ್ತಾರೆ. ಬಾಪೂಜಿ ಪದವಿಪೂರ್ವ ಕಾಲೇಜಿನಲ್ಲಿ ಒಟ್ಟು 931 ವಿದ್ಯಾರ್ಥಿಗಳ ಪರೀಕ್ಷಗೆ ಹಾಜರಾಗಬೇಕಿದ್ದು, 881 ವಿದ್ಯಾರ್ಥಿಗಳು ಹಾಜರಾಗಿ 50 ವಿದ್ಯಾರ್ಥಿಗಳು ಗೈರಾಗಿರುತ್ತಾರೆ. ಪರಶುರಾಮಪುರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಒಟ್ಟು 379 ವಿದ್ಯಾರ್ಥಿಗಳು ಹಾಜರಾಗಬೇಕಿದ್ದು, 347 ವಿದ್ಯಾರ್ಥಿಗಳು ಹಾಜರಾಗಿ 32 ವಿದ್ಯಾರ್ಥಿಗಳು ಗೈರಾಗಿರುತ್ತಾರೆ. ದ್ವಿತೀಯ ಪಿಯುಸಿ ಪ್ರಥಮ ದಿನ ಕನ್ನಡ ಭಾಷೆಗೆ ಸಂಬಂಧಪಟ್ಟಂತೆ ಪರೀಕ್ಷೆ ನಡೆದಿದ್ದು, ತಾಲ್ಲೂಕಿನಾದ್ಯಂತ ಒಟ್ಟು 2728 ವಿದ್ಯಾರ್ಥಿಗಳಲ್ಲಿ 2582 ವಿದ್ಯಾರ್ಥಿಗಳು ಹಾಜರಾಗಿ, 146 ವಿದ್ಯಾರ್ಥಿಗಳು ಗೈರು ಹಾಜರಾಗಿರುತ್ತಾರೆ.

### ಬಂಡೆಹಟ್ಟಿ ಹಾಡುಹಗಲೇ ಜೂಜಾಟ : 29300 ಹಣ ವಶ, ಬೈಕ್ ಹಾಗೂ ಜನರ ಮೇಲೆ ಪ್ರಕರಣ

» **ಚಳ್ಳಕೆರೆ**

ಕಳೆದ ಹಲವಾರು ತಿಂಗಳುಗಳಿಂದ ನಗರದ ಪೊಲೀಸ್ ಇಲಾಖೆ ಜೂಜಾಟವನ್ನು ನಿಯಂತ್ರಿಸುವ ನಿಟ್ಟಿನಲ್ಲಿ ನಿರಂತರ ಕಾರ್ಯಚರಣೆ ನಡೆಸುತ್ತಿದ್ದರೂ ಪೊಲೀಸ್ ಇಲಾಖೆ ಕಣ್ಣು ತಪ್ಪಿಸಿ ಜೂಜಾಟವಾಡುತ್ತಿದ್ದ ಖಚಿತ ವರ್ತಮಾನದ ಮೇರೆಗೆ ಪೊಲೀಸ್ ಇಲಾಖೆ ಬಂಡೆಹಟ್ಟಿಯ ಅರಣ್ಯ ಪ್ರದೇಶದಲ್ಲಿ ಶುಕ್ರವಾರ ಮಧ್ಯಾಹ್ನ ದಿಢೀರ್ ದಾಳಿ ನಡೆಸಿ ಎಂಟು ಜನರನ್ನು ವಶಕ್ಕೆ ಪಡೆದು ಜೂಜಾಟದ ಹಣ 29300, ನಾಲ್ಕು ಬೈಕ್ ವಶಪಡಿಸಿಕೊಂಡಿದ್ದಾರೆ. ಠಾಣಾ ಇನ್ಸ್‌ಪೆಕ್ಟರ್ ಕೆ.ಕುಮಾರ್ ಈ ಬಗ್ಗೆ ಮಾಹಿತಿ ನೀಡಿ, ಜಿಲ್ಲಾ ರಕ್ಷಣಾಧಿಕಾರಿಗಳು ಹಾಗೂ ಉಪವಿಭಾಗದ ಡಿವೈಎಸ್ಪಿ ಮಾರ್ಗದರ್ಶನದಲ್ಲಿ ಖಚಿತ ಮಾಹಿತಿ ಮೇರೆಗೆ ಪಿಎಸ್‌ಐ ಮತ್ತು ಸಿಬ್ಬಂದಿ ವರ್ಗ ದಿಢೀರ್ ದಾಳಿ ನಡೆಸಿ ಹಣ ಹಾಗೂ ಬೈಕ್‌ನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ. ಚಳ್ಳಕೆರೆ ಠಾಣಾ ವ್ಯಾಪ್ತಿಯಲ್ಲಿ ಯಾವುದೇ ಜೂಜಾಟ ಹಾಗೂ ಇನ್ನಿತರ ಕಾನೂನು ಬಾಹಿರ ಚಟುವಟಿಕೆಗಳು ನಡೆಯುತ್ತಿದ್ದಲ್ಲಿ ಪೊಲೀಸ್ ಇಲಾಖೆಗೆ ಮಾಹಿತಿ ನೀಡುವಂತೆ ಮನವಿ ಮಾಡಿದ್ಧಾರೆ.

### ಮದುವೆಯಾಗುವ ಆಮೀಷವೊಡ್ಡಿ ಗರ್ಭಿಣಿಯಾದ ಕೂಡಲೇ ಕೈಕೊಟ್ಟ ಯುವಕ: ದೂರು ದಾಖಲು

» **ಚಳ್ಳಕೆರೆ**

ಮದುವೆಯಾಗುವುದಾಗಿ ನಂಬಿಕೆ ಹುಟ್ಟಿಸಿ ಕಳೆದ ನಾಲ್ಕು ವರ್ಷಗಳಿಂದ ಯುವತಿಯೊಂದಿಗೆ ಲೈಗಿಂಕ ಸಂಪರ್ಕ ಹೊಂದಿ ನಂತರ ಆಕೆ ಗರ್ಭಿಣಿಯಾಗಿದ್ದು, ಮದುವೆಯಾಗುವಂತೆ ಯುವತಿ ಕೇಳಿದಾಗ ನಿರಾಕರಿಸಿದ ಯುವಕ ವಿರುದ್ಧ ಪೋಕ್ಸೊ ಪ್ರಕರಣ ದಾಖಲು ಮಾಡಲಾಗಿದೆ ಎಂದು ಇನ್ಸ್‌ಪೆಕ್ಟರ್ ಕೆ.ಕುಮಾರ್ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಅವರು, ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಪ್ರಕರಣ ದಾಖಲಿಸಿ, ದೊಡ್ಡೇರಿ ಗೊಲ್ಲರಹಟ್ಟಿಯ ತಿಪ್ಪೇಶ(21) ಅದೇ ಗ್ರಾಮದ ತನ್ನ ಜಮೀನಿನ ಬಳಿಯೇ ವಾಸವಿದ್ದ ಯುವತಿಯನ್ನು ಕಳೆದ ನಾಲ್ಕು ವರ್ಷಗಳಿಂದ ಪ್ರೀತಿಸುವ ನಾಟಕವಾಡಿ ಕಳೆದ ಆಗಸ್ಟ್ 2023ರಲ್ಲಿ ಆಕೆ ಗರ್ಭಿಣಿಯಾದಾಗ ಅವಳನ್ನು ಮದುವೆಯಾಗದೆ ವಂಚಿಸಿದ್ದು, ಈ ಬಗ್ಗೆ ಪಿರ್ಯಾದಿ ನೀಡಿದ ದೂರಿನ ಮೇಲೆ ಆರೋಪಿ ತಿಪ್ಪೇಶ್ ವಿರುದ್ಧ ಪ್ರಕರಣ ದಾಖಲಿಸಿದೆ ಎಂದು ತಿಳಿಸಿದ್ಧಾರೆ.

### ಹೃದಯಘಾತ : ಬುಕ್ಕಾಂಬೂದಿ ಗ್ರಾಮದ ವೃದ್ಧ ಪಕೀರಪ್ಪ ನಿಧನ

» **ಚಳ್ಳಕೆರೆ**

ಹೃದಯಘಾತ ವೃದ್ದನ ಸಾವು :- ತಾಲ್ಲೂಕಿನ ತಳಕು ಹೋಬಳಿಯ ಬುಕ್ಕಾಂಬೂದಿ ಗ್ರಾಮದ ಫಕೀರ್‌ಸಾಬ್(64) ಕಾರ್ಯನಿಮಿತ್ತ ಚಳ್ಳಕೆರೆ ಕೆಎಸ್‌ಆರ್‌ಟಿಸಿ ಬಸ್ಟಾಂಡ್ ಮುಂಭಾಗದ ಡಿಸಿಸಿ ಬ್ಯಾಂಕ್ ಬಳಿ ಮೂತ್ರವಿಸರ್ಜನೆಗೆ ತೆರಳಿದಾಗ ದಿಢೀರ್ ಕುಸಿದುಬಿದ್ದು ಮೃತಪಟ್ಟಿರುತ್ತಾನೆ. ಮೃತ ಪುತ್ರ ರಸೂಲ್‌ಸಾಬ್ ಪೊಲೀಸರಿಗೆ ದೂರು ನೀಡಿ, ನನ್ನ ತಂದೆ ಸಾವಿನಲ್ಲಿ ಯಾವುದೇ ಅನುಮಾನವಿಲ್ಲದೆಂದು ತಿಳಿಸಿದ್ದು, ಪಿಎಸ್‌ಐ ಜೆ.ಶಿವರಾಜ್ ಅಸ್ವಾಭಾವಿಕ ಸಾವು ಪ್ರಕರಣ ದಾಖಲಿಸಿದ್ಧಾರೆ.

---

**ಯುವ ಸೌರಭ ಕಾರ್ಯಕ್ರಮ – ಕೇಂದ್ರದ ಸಂಯೋಜನಾಧಿಕಾರಿ ಡಾ.ಎಂ.ಯು.ಲೋಕೇಶ್**

# ನೆಲಸಂಸ್ಕೃತಿ ಉಳಿಸಿ ಬೆಳೆಸುವಂತಾಗಬೇಕು

» **ಚಿತ್ರದುರ್ಗ**







ಪ್ರಸ್ತುತ ದಿನಗಳಲ್ಲಿ ಬೇರೆ ಬೇರೆ ಮಾಧ್ಯಮಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತಿರುವುದರಿಂದ ನೆಲಸಂಸ್ಕೃತಿ ಪ್ರದರ್ಶಿಸಲು ವೇದಿಕೆಯ ಅವಕಾಶಗಳು ಕಡಿಮೆಯಾಗುತ್ತಿವೆ, ಹೀಗಾಗಿ ನೆಲಸಂಸ್ಕೃತಿಯನ್ನು ಉಳಿಸಿ ಬೆಳೆಸುವುದು ಇಂದಿನ ಅಗತ್ಯಗಳಲ್ಲೊಂದಾಗಿದೆ ಎಂದು ದಾವಣಗೆರೆ ವಿಶ್ವವಿದ್ಯಾನಿಲಯ ಚಿತ್ರದುರ್ಗ ಸ್ನಾತಕೋತ್ತರ ಅಧ್ಯಯನ ಕೇಂದ್ರ ಸಂಯೋಜನಾಧಿಕಾರಿ ಡಾ.ಎಂ.ಯು.ಲೋಕೇಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಗುಡ್ಡದರಂಗವ್ವನಹಳ್ಳಿಯ ದಾವಣಗೆರೆ ವಿಶ್ವವಿದ್ಯಾನಿಲಯಸ್ನಾತಕೋತ್ತರಅಧ್ಯಯನ ಕೇಂದ್ರದಲ್ಲಿ ಶುಕ್ರವಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಯುವ ಸೌರಭ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಮುಂದಿನ ದಿನಗಳಲ್ಲಿ ಯುವ ಜನತೆ, ಕನ್ನಡ ನೆಲಮೂಲ ಸಂಸ್ಕೃತಿಯನ್ನು ಬಿತ್ತರಿಸಲು ಸಿಗುವ ವೇದಿಕೆಗಳನ್ನು ಸದುಪ 'ಯೋಗಪಡಿಸಿಕೊಳ್ಳಬೇಕು. ಯುವ ಸೌರಭ ಕೇವಲ ಒಂದು ದಿನಕ್ಕೆ ಸೀಮಿತವಾಗಿರಬಾರದು. ಯುವಕ-ಯುವತಿಯರು ಇಂತಹ ವೇದಿಕೆಗಳನ್ನು ಬಳಸಿಕೊಂಡು ತಮ್ಮ ಪ್ರತಿಭೆ ಅನಾವರಣಗೊಳಿಸಬೇಕು. ನಮ್ಮ ಸಂಸ್ಕೃತಿ ಬಿತ್ತರಗೊಳಿಸಲು ಯುವ ಸೌರಭ ಉತ್ತಮ ವೇದಿಕೆಯಾಗಿದೆ ಎಂದು ಅಭಿಪ್ರಾಯಪಟ್ಟರು.

ಪ್ರಪಂಚದಲ್ಲಿಯೇ ಭಾರತ ದೇಶ ಹೆಚ್ಚು ಯುವಶಕ್ತಿಹೊಂದಿದೆ. ಹಾಗೆಯೇ ಭಾರತದ ನೆಲಮೂಲ ಸಂಸ್ಕೃತಿಯಾಗಿ ಪ್ರತಿಯೊಂದು ರಾಜ್ಯದ, ಪ್ರತಿಯೊಂದು ಭಾಗದ ಸಂಸ್ಕೃತಿ ಬಿಂಬಿಸಲು ಕಲಾಪ್ರದರ್ಶನ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಕನ್ನಡದ ನೆಲ ಸಂಸ್ಕೃತಿಯನ್ನು ಪ್ರದರ್ಶಿಸಲು ಹಾಗೂ ಮನೋರಂಜನೆ ನೀಡಲು ಯುವ ಸೌರಭ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜಿತಗೊಂಡಿದೆ ಎಂದು ಹೇಳಿದರು.ಕನ್ನಡ ಅಧ್ಯಯನ ವಿಭಾಗ ವಿಷಯ ಸಂಯೋಜಕ ಡಾ.ಹೆಚ್.ಜಿ .ವಿಜಯಕುಮಾರ್ ಮಾತನಾಡಿ, ಕಲಾ ತಂಡಗಳು ಹಾಗೂ ಕಲಾವಿದರಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಕಾರ್ಯನಿರ್ವಹಿಸುತ್ತಿದೆ. ಯುವ ಜನತೆಯನ್ನು ಕಲೆಗಳ ಕಡೆಗೆ ಸೆಳೆಯುವ ಪ್ರಯತ್ನ ಆಶಾದಾಯಕವಾಗಿದ್ದು, ಯುವ ಜನತೆ ಸಾಂಸ್ಕೃತಿಕ ಕಲೆಗಳನ್ನು ಉಳಿಸಿ ಬೆಳೆಸುವ ಕೆಲಸವಾಗಬೇಕು ಎಂದು ಆಶಯ ವ್ಯಕ್ತಪಡಿಸಿದರು.

ವಿದ್ಯಾರ್ಥಿಗಳ ಮುದಗೊಳಿಸಿದ ಯುವ ಸೌರಭ: ಯುವ ಸೌರಭ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಂಡಿದ್ದ ಸಾಂಸ್ಕೃತಿಕ ಕಾರ್ಯಕ್ರಮಗಳು ಸ್ನಾತಕೋತ್ತರ ಕೇಂದ್ರದ ವಿದ್ಯಾರ್ಥಿಗಳ ಮನಸೂರೆಗೊಂಡಿತು.

ಚಿತ್ರದುರ್ಗ ಮೈಲಾರಿ ಮತ್ತು ತಂಡದವರ ಜನಪದ ಗೀತೆಗಳು, ಹಿರಿಯೂರಿನ ನಾಗಶ್ರೀ ಭಟ್ ಅವರ ಸಮೂಹ ನೃತ್ಯ, ಚಿತ್ರದುರ್ಗದ ಅಫ್ರೀನ್ ಕೌಸರ್ ಮತ್ತು ಸಂಗಡಿಗರ ಸುಗಮ ಸಂಗೀತ, ಚಿತ್ರಹಳ್ಳಿಯ ಎನ್.ಹನುಮಂತ ಮತ್ತು ತಂಡದಿದವರ ನಾಸಿಕ್ ಡೋಲು, ಎಂ.ಕೆ.ಹಟ್ಟಿಯ ಕೆ.ಮನು ಮತ್ತು ತಂಡದವರ ಕಹಳೆ ವಾಹನ ಹಾಗೂ ಗೋನೂರಿನ ಆಕಾಶ್ ಮತ್ತು ತಂಡದವರಿಂದ ಕೋಟು ಹಾಸ್ಯ ನಾಟಕ ಪ್ರದರ್ಶನ ನಡೆಯಿತು.

ಸಂವಿಧಾನ ಜಾಗೃತಿ ಜಾಥಾ: ದಾವಣಗೆರೆ ವಿಶ್ವವಿದ್ಯಾನಿಲಯ ಜಿ.ಆರ್.ಹಳ್ಳಿ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಮುಖ್ಯದ್ವಾರದಲ್ಲಿ ಸಂವಿಧಾನ ಜಾಗೃತಿ ಜಾಥಾ ಹಾಗೂ ಯುವ ಸೌರಭ ಕಾರ್ಯಕ್ರಮಕ್ಕೆ ದಾವಣಗೆರೆ ವಿಶ್ವವಿದ್ಯಾನಿಲಯ ಚಿತ್ರದುರ್ಗ ಸ್ನಾತಕೋತ್ತರ ಅಧ್ಯಯನ ಕೇಂದ್ರ ಸಂಯೋಜನಾಧಿಕಾರಿ ಡಾ.ಎಂ.ಯು.ಲೋಕೇಶ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ಅವರು ಇದೇ ಸಂದರ್ಭದಲ್ಲಿ ಚಾಲನೆ ನೀಡಿದರು.

ಜಿ.ಆರ್.ಹಳ್ಳಿ ಸ್ನಾತಕೋತ್ತರ ಅಧ್ಯಯನ ಕೇಂದ್ರದಮುಖ್ಯದ್ವಾರದಿಂದಪ್ರಾರಂಭವಾದ ಮೆರವಣಿಗೆಯು ವೇದಿಕೆ ಕಾರ್ಯಕ್ರಮ ನಡೆಯುವ ಸಭಾಂಗಣದವರೆಗೆ ಮೆರವಣಿಗೆ ನಡೆಯಿತು. ವಿವಿಧ ಜಾನಪದ ಕಲಾಪ್ರಕಾರಗಳು ಮೆರವಣಿಗೆಗೆ ಮೆರಗು ನೀಡಿತು. ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ, ದಾವಣಗೆರೆ ವಿಶ್ವವಿದ್ಯಾಲಯ ಜಿ.ಆರ್.ಹಳ್ಳಿ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಪ್ರಾಧ್ಯಾಪಕರಾದ ರೂಪೇಶ್ ಕುಮಾರ್, ಡಾ.ಭೀಮಾಶಂಕರ್, ಡಾ.ಗಿರೀಶ್, ಬಿ.ಟಿ.ನಿವೇದಿತಾ,ಶೌಕತ್‌ಅಲಿ,ಅರುಣ್‌ಕುಮಾರ್, ಎನ್‌ಎಸ್‌ಎಸ್ ಅಧಿಕಾರಿ ಸುಂದರಂ, ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ಸೇರಿದಂತೆ ಸ್ನಾತಕೋತ್ತರ ಅಧ್ಯಯನ ಕೇಂದ್ರದ ವಿದ್ಯಾರ್ಥಿಗಳು ಇದ್ದರು.

---

# ಗ್ರಾಮ ಆರೋಗ್ಯ ನೈರ್ಮಲ್ಯ ಸಮಿತಿ ಪಾತ್ರ ಮಹತ್ವದದ್ದು: ಡಾ.ಸುಷ್ಮಿತಾ

» **ಚಿತ್ರದುರ್ಗ**



ಆರೋಗ್ಯ ಸಮಸ್ಯೆ ಪರಿಹರಿಸುವಲ್ಲಿ ಗ್ರಾಮ ಆರೋಗ್ಯ ನೈರ್ಮಲ್ಯ ಸಮಿತಿ ಸದಸ್ಯರ ಪಾತ್ರ ಮಹತ್ವವಾದದು ಎಂದು ಯಳಗೋಡು ವೈದ್ಯಾಧಿಕಾರಿ ಡಾ.ಸುಷ್ಮಿತಾ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಯಳಗೋಡು ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಸಭಾಂಗಣದಲ್ಲಿ ಶುಕ್ರವಾರ ಏರ್ಪಡಿಸಲಾಗಿದ್ದ ವಿಶ್ವಾಸ್ ಆಂದೋಲನ ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಾರ್ವಜನಿಕ ಆರೋಗ್ಯ, ಸಾಂಕ್ರಾಮಿಕ ರೋಗ ನಿಯಂತ್ರಣ, ತಾಯಿ ಮಕ್ಕಳ ಆರೋಗ್ಯ ಸಮಸ್ಯೆ, ಕ್ಷಯರೋಗ ನಿಯಂತ್ರಣ, ಜೀವನಶೈಲಿ ರೋಗಗಳ ನಿಯಂತ್ರಣ ಕಾಪಾಡುವಲ್ಲಿ ಗ್ರಾಮ ಆರೋಗ್ಯ ನೈರ್ಮಲ್ಯ ಹಾಗೂ ಪೌಷ್ಟಿಕ ಸಮಿತಿಗಳ ಪಾತ್ರ ಮುಖ್ಯವಾಗಿದೆ. ಸಮಿತಿ ಸದಸ್ಯರು ದಿನಾಂಕ 03-03-2024 ರಂದು ನಡೆಯುವ ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮಕ್ಕೆ ಸಹಕರಿಸಬೇಕು. ಯಳಗೋಡಿನ ವ್ಯಾಪ್ತಿಯಲ್ಲಿ ಮತ್ತು ಮುದ್ದಾಪುರ ವ್ಯಾಪ್ತಿಯಲ್ಲಿ ಬರುವ ಒಟ್ಟು 39 ಹಳ್ಳಿಗಳಲ್ಲಿಯೂ ಸಹ ಗ್ರಾಮ ಆರೋಗ್ಯ ಸಭೆ ನಡೆಸಿ ಸ್ಥಳೀಯ ಶಾಲೆಗಳಲ್ಲಿ ಪಲ್ಸ್ ಪೋಲಿಯೊ ಜಾಗೃತಿ ಜಾಥ ನಡೆಸಿ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು ಎಂದರು.

ಆರೋಗ್ಯ ನೈರ್ಮಲ್ಯ ಪೌಷ್ಟಿಕ ಸಮಿತಿ ರಚನೆ, ಸದಸ್ಯರ ಆಯ್ಕೆ ಮಾನದಂಡಗಳು, ಸದಸ್ಯರ ಜವಾಬ್ದಾರಿ ಆಶಾ ಕಾರ್ಯಕರ್ತೆಯರ ಕೆಲಸ ಕಾರ್ಯಗಳು ಬಗ್ಗೆ ಜಿಲ್ಲಾ ಸಂಯೋಜಕ ಕರಕಪ್ಪ ಮೇಟಿ ತರಬೇತಿ ನೀಡಿದರು.

ವಿಶ್ವಾಸ್ ಆಂದೋಲನದ ಪರಿಚಯ, ವಾರ್ಷಿಕ ಕ್ರಿಯಾ ಯೋಜನೆ ರಚನೆ, ಆರೋಗ್ಯ ಸಮಸ್ಯೆಗಳ ಪಟ್ಟಿ ಮಾಡಿ ಚರ್ಚಿಸಿ ಜನ ಜಾಗೃತಿಯನ್ನು ಪ್ರತಿ ತಿಂಗಳು ಒಂದೊಂದು ಆರೋಗ್ಯ ಮತ್ತು ಶುಚಿತ್ವ, ಜೀವನ ಶೈಲಿ ಬದಲಾವಣೆ ಇತರೆ ಸಾಮಾಜಿಕ ಪಿಡುಗುಗಳ ಬಗ್ಗೆ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ, ಆರೋಗ್ಯ ನಿರೀಕ್ಷಣಾಧಿಕಾರಿ ಕಿರಣ್ ಎಮ್.ಎಸ್, ಕುಬೇಲಾ, ಪ್ರಾಥಮಿಕ ಆರೋಗ್ಯ ಸುರಕ್ಷಿತಾ ಆಧಿಕಾರಿ ರುಕ್ಮಿಣಿ, ಸುನೀತಾ,ಜೋತಿ ಸಮುದಾಯ ಆರೋಗ್ಯಾಧಿಕಾರಿ ಶಾಲಿನಿ,ವಿನಯ್, ದಿನೇಶ್, ಗ್ರಾಮ ಆರೋಗ್ಯ ನೈರ್ಮಲ್ಯ ಪೌಷ್ಟಿಕ ಸಮಿತಿ ಸದಸ್ಯರಾದ ನಾಗರಾಜ್, ರತ್ನಮ್ಮ, ಕವಿತಾ, ವೀಣಾ ಇತರರು ಭಾಗವಹಿಸಿದ್ದರು.

---

## ಚಿತ್ರದುರ್ಗ ಮೆಡಿಕಲ್ ಕಾಲೇಜಿಗೆ ಡಾ.ಸಂಜೀವ್ ಡೀನ್: ವಿರೋಧ



» **ಚಿತ್ರದುರ್ಗ**

ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ದಲಿತರ ವಿರೋಧಿ ಡಾ.ಸಂಜೀವ್ ಇವರನ್ನು ಚಿತ್ರದುರ್ಗ ಸರ್ಕಾರಿ ಮೆಡಿಕಲ್ ಕಾಲೇಜಿಗೆ ಡೀನ್ ಆಗಿ ನೇಮಕ ಮಾಡಿರುವುದು ಎಷ್ಟು ಸರಿ ಎಂದು ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಪ್ರಶ್ನಿಸಿದರು.?

ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಚಾಮರಾಜನಗರ ಸರ್ಕಾರಿ ಮೆಡಿಕಲ್ ಕಾಲೇಜಿನಲ್ಲಿ ಡೀನ್ ಆಗಿದ್ದ ಡಾ.ಸಂಜೀವ್ ಅಂಬೇಡ್ಕರ್ ಮತ್ತು ದಲಿತರನ್ನು ಹಿಯಾಳಿಸಿದ್ದರಿಂದ ಯಾವುದೇ ಕಾರಣಕ್ಕೂ ಸರ್ಕಾರ ಅವರನ್ನು ಚಿತ್ರದುರ್ಗ ಮೆಡಿಕಲ್ ಕಾಲೇಜಿಗೆ ಡೀನ್ ಆಗಿ ನೇಮಕ ಮಾಡಬಾರದು. ಆದೇಶವನ್ನು ಹಿಂದಕ್ಕೆ ಪಡೆಯಬೇಕೆಂದು ಒತ್ತಾಯಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಡಾ.ಸಂಜೀವ್‌ರನ್ನು ಚಿತ್ರದುರ್ಗ ಸರ್ಕಾರಿ ಮೆಡಿಕಲ್ ಕಾಲೇಜು ಡೀನ್ ಆಗಿ ನೇಮಕ ಮಾಡಬೇಕೆಂದು ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್‌ಗೆ ಪತ್ರ ಬರೆದಿದ್ದಾರೆ. ಚಾಮರಾಜನಗರ ಠಾಣೆಯಲ್ಲಿ ಇವರ ವಿರುದ್ಧ ಎಫ್.ಐ.ಆರ್.ದಾಖಲಾಗಿದೆ. ಆದರೂ ಪೂರ್ವಾಪರ ವಿಚಾರಗಳನ್ನು ತಿಳಿದುಕೊಳ್ಳದೆ ಏಕಾಏಕಿಯಾಗಿ ಡಾ.ಸಂಜೀವ್‌ರನ್ನು ಚಿತ್ರದುರ್ಗ ಮೆಡಿಕಲ್ ಕಾಲೇಜು ಡೀನ್ ಆಗಿ ನೇಮಕ ಮಾಡಿರುವುದಕ್ಕೆ ನಮ್ಮ ವಿರೋಧವಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಬೇಕು. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕೂಡ ದಲಿತರಿಗೆ ಅನ್ಯಾಯ ಮಾಡುತ್ತಿದ್ದಾರೆಂದು ಕೆ.ಟಿ.ಶಿವಕುಮಾರ್ ಕಿಡಿಕಾರಿದರು.

---

**ಪ್ರಮುಖ ಸುದ್ದಿ**

# ಒಳ ಮೀಸಲಾತಿಯಿಂದ ಬಂಜಾರ ಸಮುದಾಯಕ್ಕೆ ಅನ್ಯಾಯ

» **ಚಿತ್ರದುರ್ಗ**



ಒಳ ಮೀಸಲಾತಿ ವರ್ಗಿಕರಿಸಿ ರಾಜ್ಯ ಸರ್ಕಾರ ಕೇಂದ್ರಕ್ಕೆ ವರದಿ ಶಿಫಾರಸ್ಸು ಮಾಡಿರುವುದನ್ನು ಕೂಡಲೆ ವಾಪಸ್ ಪಡೆಯಬೇಕು. ಇಲ್ಲವಾದಲ್ಲಿ ಉಗ್ರ ಹೋರಾಟ ಮಾಡಲಾಗುವುದೆಂದು ಬಂಜಾರ ಗುರುಪೀಠದ ಸರ್ದಾರ್ ಸೇವಾಲಾಲ್ ಸ್ವಾಮೀಜಿ ಎಚ್ಚರಿಕೆ ನೀಡಿದರು.

ಬಂಜಾರ ಲಂಬಾಣಿ ಸಮಾಜ ಮತ್ತು ಕರ್ನಾಟಕ ರಕ್ಷಣಾ ವೇದಿಕೆ ಕನ್ನಡ ಸೇನೆ ಇವರ ಸಂಯುಕ್ತಾಶ್ರಯದಲ್ಲಿ ಬಂಜಾರ ಭವನದಲ್ಲಿ ಶುಕ್ರವಾರ ನಡೆದ ಸಂತ ಸದ್ಗುರು ಸೇವಾಲಾಲ್ ಮಹಾರಾಜರ 285 ನೇ ಜಯಂತ್ಯೋತ್ಸವ ಉದ್ಘಾಟಿಸಿ ಮಾತನಾಡಿದರು.

ಒಳ ಮೀಸಲಾತಿ ವರ್ಗಿಕರಣದಿಂದ ಕೊರಚ, ಕೊರಮ, ಲಂಬಾಣಿ, ಭೋವಿ ಜನಾಂಗಕ್ಕೆ ಅನ್ಯಾಯವಾಗುತ್ತದೆ. ಹಾಗಾಗಿ ರಾಜ್ಯ ಸರ್ಕಾರ ಕೇಂದ್ರಕ್ಕೆ ಶಿಫಾರಸ್ಸು ಮಾಡಿರುವ ವರದಿಯನ್ನು ಹಿಂದಕ್ಕೆ ತರಿಸಿಕೊಳ್ಳಬೇಕು. 3600 ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಸರ್ಕಾರ ಘೋಷಿಸಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಲಂಬಾಣಿ ಸಮಾಜದಲ್ಲಿ ಸಣ್ಣಪುಟ್ಟ ಮನಸ್ತಾಪ, ದ್ವೇಷ, ಅಸೂಯೆಗಳಿವೆ. ನಮ್ಮ ಸಮಾಜ ಪವಿತ್ರವಾದುದು, ಯಾರ ಮೇಲೂ ದೌರ್ಜನ್ಯ, ದಬ್ಬಾಳಿಕೆ ನಡೆಸಲಿಲ್ಲ. ಮೋಸ, ವಂಚನೆ ಮಾಡಿಲ್ಲ. ಡಾ.ಬಿ.ಆರ್.ಅಂಬೇಡ್ಕರ್ ಕೊಟ್ಟಿರುವ ಸಂವಿಧಾನದಿಂದ ಸ್ವಾಭಿಮಾನದಿಂದ ಬದುಕುತ್ತಿದ್ದೇವೆ. ಸರ್ದಾರ್ ಸೇವಾಲಾಲ್ ಮಹಾರಾಜರು ಶಾಂತಿ ಪ್ರಿಯರು. ಸಂದರ್ಭ ಬಂದಾಗ ಕ್ರಾಂತಿಕಾರರಾಗುತ್ತಿದ್ದರು. ಶಾಂತಿ-ಕ್ರಾಂತಿಯ ಸಂಕೇತ ನಮ್ಮದು. ಕೆಲವು ದುಷ್ಟ ಶಕ್ತಿಗಳು ಕೆಣಕುತ್ತಿದ್ದಾರೆ. ಧರ್ಮಕ್ಕೆ ದ್ರೋಹ ಅಪಚಾರ ಮಾಡುವವರು ಸರ್ವನಾಶವಾಗುತ್ತಾರೆಂದರು.ಸರ್ದಾರ್ ಸೇವಾಲಾಲ್ ಮಹಾರಾಜರು ಅವತಾರ ಪುರುಷರು, ಆದರ್ಶ ಮೌಲ್ಯಗಳನ್ನು ಕೊಟ್ಟಿದ್ದಾರೆ. ಅದರಂತೆ ಸಾಗುತ್ತಿದ್ದೇವೆ. ಲಂಬಾಣಿ ಜನಾಂಗದಲ್ಲಿರುವ ಮುಗ್ದತೆಯನ್ನು ದುರುಪಯೋಗಪಡಿಸಿಕೊಂಡು ಅನ್ಯ ಧರ್ಮಿಯರು ಪ್ರೀತಿಸುವ ನೆಪದಲ್ಲಿ ಮತಾಂತರ ಮಾಡುತ್ತಿದ್ದಾರೆ. ಅದನ್ನು ಎಂದಿಗೂ ನಾವು ಸಹಿಸುವುದಿಲ್ಲ. ಪ್ರತಿ ತಾಂಡಾಗಳಿಗೆ ಹೋಗಿ ಜಾಗೃತಿ ಅಭಿಯಾನ ಕೈಗೊಳ್ಳುತ್ತೇವೆ. ಏನಾದರೂ ವೈಮನಸ್ಸಿದ್ದರೆ ಬಂದು ಮಾತನಾಡಲಿ. ಅದನ್ನು ಬಿಟ್ಟು ಒಳಗಿಂದೊಳಗೆ ಬೇರೆಯವರನ್ನು ಎತ್ತಿಕಟ್ಟಿ ಸಮಾಜ ಹೊಡೆಯುವ ಕೆಲಸ ಮಾಡಬಾರದು. ನಮಗೆ ಸಮಾಜ, ಧರ್ಮ ಮುಖ್ಯ ಎಂದು ಹೇಳಿದರು.

ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸದಸ್ಯರು, ಐಸಾಕ್ ಚೇರ್ಮನ್ ನವದೆಹಲಿಯ ಲೋಕೇಶ್ವರ್ ನಾಯ್ಕ ಎಂ. ಮಾತನಾಡಿ ಲಂಬಾಣಿ ಸಮಾಜದವರಿಗೆ ಆಸೆ ಆಮಿಷಗಳನ್ನು ತೋರಿಸಿ ಮತಾಂತರ ಮಾಡುವವರ ವಿರುದ್ಧ ಹೋರಾಡಬೇಕಿದೆ. ಕ್ರಿಶ್ಚಿಯನ್ನರು ಮತಾಂತರ ಮಾಡುತ್ತಿದ್ದಾರೆ. ಲಂಬಾಣಿ ಸಮಾಜದಲ್ಲಿ ಅನೇಕ ಪ್ರತಿಭಾವಂತರಿದ್ದಾರೆ. ಅಂತಹವರನ್ನು ಗುರುತಿಸಿ ಬೆಳಕಿಗೆ ತರುವ ಕೆಲಸವಾಗಬೇಕೆಂದು ಸಲಹೆ ನೀಡಿದರು.

ಬಂಜಾರ ಲಂಬಾಣಿ ಸಮಾಜದ ಜಿಲ್ಲಾಧ್ಯಕ್ಷ ಎಂ.ಸತೀಶ್‌ಕುಮಾರ್ ಮಾತನಾಡುತ್ತ ಕೆಲವು ಕಿಡಿಗೇಡಿಗಳು ಸಮಾಜದಲ್ಲಿ ಒಡಕು ಮೂಡಿಸುತ್ತಿದ್ದಾರೆ. ಛಿದ್ರವಾಗಲು ಬಿಡುವುದಿಲ್ಲ. 55 ಹೆಣ್ಣು ಮಕ್ಕಳ ಮತಾಂತರಗೊಳಿಸಿ ಕೋಟೆ ಸಮೀಪವಿರುವ ಜೆಪ್ಸಿ ಹಾಸ್ಟೆಲ್‌ನಲ್ಲಿಟ್ಟಿದ್ದಾಗ ದಾಳಿ ನಡೆಸಿ ಹೊರ ತಂದಿದ್ದೇವೆ. ರಾಜ್ಯಾದ್ಯಂತ ಸ್ವಾಮೀಜಿಗಳ ಮುಂದಾಳತ್ವದಲ್ಲಿ ಸಂಚರಿಸಿ ಮತಾಂತರ ತಡೆಗಟ್ಟುವಿಕೆಗೆ ಹೋರಾಡುತ್ತೇವೆಂದು ಹೇಳಿದರು.

# ಉತ್ಪನ್ನಗಳ ಬ್ರ್ಯಾಂಡಿಂಗ್, ಮಾರುಕಟ್ಟೆ ನಿರ್ವಹಣೆಗೆ ಆದ್ಯತೆ ನೀಡಿ: ಶಾಸಕ

» ಚಿತ್ರದುರ್ಗ

ಮಹಿಳಾ ಸ್ವ-ಸಹಾಯ ಗುಂಪುಗಳು ದೊಡ್ಡ ಉದ್ದಿಮೆಗಳಾಗುವ ನಿಟ್ಟಿನಲ್ಲಿ ತಮ್ಮ ಉತ್ಪನ್ನಗಳ ಬ್ರ್ಯಾಂಡಿಂಗ್, ಹಣಕಾಸು ಹಾಗೂ ಮಾರುಕಟ್ಟೆ ನಿರ್ವಹಣೆ ಹೆಚ್ಚಿನ ಒತ್ತು ನೀಡಬೇಕು ಎಂದು ಶಾಸಕ ವೀರೇಂದ್ರ ಪಪ್ಪಿ ಹೇಳಿದರು.

ಕೌಶಲ್ಯಾಭಿವೃದ್ಧಿ ಉದ್ಯಮಶೀಲತಾ ಮತ್ತು ಜೀವನೋಪಾಯ ಇಲಾಖೆ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (ಎನ್.ಆರ್.ಎಲ್.ಎಂ)-ಸಂಜೀವಿನಿ, ಜಿಲ್ಲಾ ಪಂಚಾಯತ್ ವತಿಯಿಂದ ಶುಕ್ರವಾರ ನಗರದ ವಾಸವಿ ಮಹಲ್ ನಲ್ಲಿ ಆಯೋಜಿಸಲಾದ ಎರಡು ದಿನಗಳ ಜಿಲ್ಲಾ ಮಟ್ಟದ ಸರಸ್ ಮೇಳ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳಾ ಸ್ವ-ಸಹಾಯ ಗುಂಪುಗಳು ತಮ್ಮ ಉತ್ಪನ್ನಗಳನ್ನು ಸುಂದರ ಆಕರ್ಷಕ ಪ್ಯಾಕಿಂಗ್‌ಗಳಲ್ಲಿ ಮಾರಾಟ ನಡೆಸುವುದರೊಂದಿಗೆ ಸ್ಥಳೀಯವಾಗಿ ಪ್ರಚಾರ, ಜಾಹೀರಾತು ಕಾರ್ಯ ಮಾಡಿಕೊಳ್ಳಬೇಕು. ಎಲ್ಲಾ ಅಂತರಾಷ್ಟ್ರೀಯ ಉತ್ಪನ್ನಗಳು ಆರಂಭದಲ್ಲಿ ಸ್ಥಳೀಯ ಮಟ್ಟದಲ್ಲಿ ಉಗಮವಾಗಿ, ಬೃಹದಾಕಾರವಾಗಿ ಬೆಳದಿವೆ. ಇದಕ್ಕೆ ಮುಖ್ಯ ಕಾರಣ ಹಣಕಾಸು ಹಾಗೂ ಮಾರುಕಟ್ಟೆವ್ಯವಸ್ಥೆಯನಿರ್ವಹಣೆಯಾಗಿದೆ ಎಂದರು.

ಒಂದೊಂದು ಮಹಿಳಾ ಸ್ವ-ಸಹಾಯ ಸಂಘದಲ್ಲಿ 12 ರಿಂದ 15 ಜನರು ಇರುತ್ತಾರೆ, ಇವರೆಲ್ಲರೂ ಉತ್ಪನ್ನಗಳ ತಯಾರಿಕೆಯಲ್ಲಿ ತೊಡಗಿಕೊಳ್ಳದೇ, ಕೆಲಸಗಳನ್ನು ಹಂಚಿಕೆ ಮಾಡಿಕೊಂಡು, ಹಣಕಾಸು ನಿರ್ವಹಣೆ ಹಾಗೂ ಮಾರುಕಟ್ಟೆ ವಿಸ್ತರಣೆ ಕಾರ್ಯಕ್ಕೆ ಪ್ರತ್ಯೇಕವಾಗಿ ಸದಸ್ಯರನ್ನು ನೇಮಿಸಿ ಕಾರ್ಯನಿರ್ವಹಿಸಬೇಕು. ಉತ್ಪಾದನೆಗಳ ಮಾರಾಟದಿಂದ ಬರುವ ಲಾಭವನ್ನು ಸಂಪೂರ್ಣವಾಗಿ ಬೇರೆಯದಕ್ಕೆ ಖರ್ಚು ಮಾಡದೆ, ಉದ್ದಿಮೆಯನ್ನು ಮತ್ತಷ್ಟು ಬಲಪಡಿಸಲು ಬಂಡವಾಳವಾಗಿ ಉಪಯೋಗಿಸಿಕೊಳ್ಳಬೇಕು ಎಂದು ತಿಳಿಸಿದರು.ಉತ್ಪನ್ನಗಳನ್ನುಅನಾಮಧೇಯ ಹೆಸರಿನಿಂದ ಮಾರಾಟ ಮಾಡುವ ಬದಲು, ಅದಕ್ಕೊಂದು ಒಳ್ಳೆಯ ಹೆಸರು ನೀಡಿ ಬ್ರ್ಯಾಂಡ್ ಆಗಿ ಪರಿವರ್ತಿಸಬೇಕು. ತಮ್ಮದೆ ಆದ ಚಿಹ್ನೆ ಅಡಿ ಉತ್ಪನ್ನಗಳನ್ನು ಮಾರಾಟ ಮಾಡಿದರೆ, ಬೇರೆಯವರು ಅದನ್ನು ಅನುಕರಿಸಿ ನಕಲು ಉತ್ಪನ್ನಗಳನ್ನು ಮಾರಾಟ ಮಾಡುವುದು ತಪ್ಪುತ್ತದೆ. ಮಾರುಕಟ್ಟೆಯ ಸ್ಪರ್ಧಾತ್ಮಕತೆಯಲ್ಲಿ ಉಳಿಯಬೇಕಾದರೆ ಸ್ವ ಸಹಾಯ ಗುಂಪುಗಳು ತಮ್ಮ ಮಾರುಕಟ್ಟೆನೀತಿಯನ್ನು ಬದಲಿಸಿಕೊಳ್ಳಬೇಕು. ಇದರಿಂದ ನಿಮ್ಮ ಉತ್ಪನ್ನಗಳು ಯಶಸ್ವಿಯಾಗಿ ಮಾರುಕಟ್ಟೆಯಲ್ಲಿ ಉಳಿಯುತ್ತವೆ ಎಂದು ಸಲಹೆ ನೀಡಿದರು.ಉತ್ಪನ್ನಗಳ ಗುಣಮಟ್ಟ ಕಾಯ್ದುಕೊಳ್ಳಬೇಕು. ಪ್ರತಿ ಉತ್ಪನ್ನಗಳ ತಯಾರಿಕೆಯಲ್ಲಿ ಸಿದ್ದ ಸೂತ್ರವನ್ನು ರೂಪಿಸಿ ಅದೇ ಮಾನದಂಡದಲ್ಲಿ ಉತ್ಪನ್ನಗಳ ತಯಾರಿಕೆ ಮಾಡಬೇಕು. ಉತ್ಪನ್ನಗಳ ಗುಣಮಟ್ಟ ಕಾಯ್ದುಕೊಳ್ಳುವ ಹಾಗೂ ಮಾರುಕಟ್ಟೆ ಅನುಕೂಲವಾಗುವಂತೆ ತರಬೇತಿಯನ್ನು ಸಹ ಮಹಿಳಾ ಸ್ವ ಸಹಾಯಗುಂಪುಗಳು ಪಡೆದುಕೊಳ್ಳಬೇಕು. ಆನ್‌ಲೈನ್ ಮಾರುಕಟ್ಟೆ ವೆಚ್ಚದಾಯಕವಲ್ಲ ಪ್ರತಿಯೊಬ್ಬರು ಮುಕ್ತವಾಗಿ ತಮ್ಮ ಉತ್ಪನ್ನಗಳನ್ನು ಆನ್‌ಲೈನ್ ಮೂಲಕ ಮಾರಾಟ ಮಾಡಬಹುದು. ಮಹಿಳಾ ಸ್ವ ಸಹಾಯ ಗುಂಪುಗಳು ಸಹ ಇ-ಮಾರುಕಟ್ಟೆಗೆ ಲಗ್ಗೆ ಇಟ್ಟು, ಪ್ರಗತಿಯತ್ತ ದಾಪುಗಾಲು ಹಾಕಬೇಕು ಎಂದರು.

ಸರಸ್ ಮೇಳದ ಬಗ್ಗೆ ಆಟೋಗಳಲ್ಲಿ ಧ್ವನಿವರ್ಧಕದ ಮೂಲಕ ಹಾಗೂ ಭಿತ್ತಿ ಪತ್ರಗಳನ್ನು ಹಂಚುವ ಮೂಲಕ ಪ್ರಚಾರ ನೀಡಬೇಕು. ಐತಿಹಾಸಿಕ ಕೋಟೆ ಹಾಗೂ ಜನಸಂದಣಿ ಹೆಚ್ಚಿರುವ ಕಡೆ ಮೇಳವನ್ನು ಆಯೋಜಿಸಿದರೆ ಮಹಿಳಾ ಸ್ವ ಸಹಾಯ ಸಂಘಗಳಿಗೆ ಹೆಚ್ಚಿನ ಪ್ರಯೋಜನವಾಗುವುದು. ಅಧಿಕಾರಿಗಳು ಈ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ರಾಜ್ಯ ಸರ್ಕಾರ ತಾಲ್ಲೂಕು ಹಾಗೂ ಜಿಲ್ಲಾ ಕೇಂದ್ರಗಳಲ್ಲಿ ಅಕ್ಕಾ ಕೆಫೆ ಹಾಗೂ ಸಂಜೀವಿನಿ ಸೂಪರ್ ಮಾರುಕಟ್ಟೆಗಳನ್ನು ತೆರೆಯಲಿದೆ. ಈ ಕುರಿತು ಬಜೆಟ್ ಭಾಷಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಘೋಷಣೆ ಮಾಡಿದ್ದಾರೆ ಎಂದು ತಿಳಿಸಿದರು.

ಜಿ.ಪಂ.ಸಿಇಓಎಸ್.ಜೆ.ಸೋಮಶೇಖರ್ ಅವರು ಮಾತನಾಡಿ, ಮಹಿಳಾ ಸ್ವ ಸಹಾಯ ಉತ್ಪಾದಕ ಸಂಘಗಳು ತಮ್ಮ ಉತ್ಪನ್ನಗಳಿಗೆ ಉತ್ತಮ ಮಾರುಕಟ್ಟೆ ಹಾಗೂ ಬೇಡಿಕೆ ಪಡೆಯುವಂತಾಗಲು ಶಾಸಕರು ನೀಡಿರುವ ಸಲಹೆಗಳನ್ನು ಅನುಷ್ಠಾನಗೊಳಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು. ಇದಕ್ಕೆ ಜಿಲ್ಲಾ ಪಂಚಾಯತ್ ನಿಂದ ಅಗತ್ಯ ನೆರವು ಒದಗಿಸಲಾಗುವುದು ಎಂದರು.

ಜಿ.ಪಂ. ಸಿಇಓ ಎಸ್.ಜೆ. ಸೋಮಶೇಖರ್, ಯೋಜನಾ ನಿರ್ದೇಶಕಿ ನಂದಿನಿ.ಆರ್.ಬಿ. ಇದ್ದರು. ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ ಸುಮಾರು 30 ಕ್ಕೂ ಹೆಚ್ಚು ಮಹಿಳಾ ಸ್ವ ಸಹಾಯ ಉತ್ಪಾದಕ ಸಂಘಗಳು ಸರಸ್ ಮೇಳದಲ್ಲಿ ಪಾಲ್ಗೊಂಡಿವೆ. ಎರಡು ದಿನಗಳ ಕಾಲ ಗಾಣದಿಂದ ತಯಾರಿಸಿದ ಶುದ್ಧ ನೈಸರ್ಗಿಕ ಎಣ್ಣೆ, ಉಪ್ಪಿನಕಾಯಿ, ಹಪ್ಪಳ, ಸಂಡಿಗೆ, ರೊಟ್ಟಿ, ಆಕರ್ಷಕ ಕಸೂತಿ ಹೊಂದಿರುವ ಸಾಂಪ್ರಾದಾಯಿಕ ಉಡುಪುಗಳು, ಕರಕುಶಲ ವಸ್ತುಗಳು ಸೇರಿದಂತೆ ನಾನಾ ವಸ್ತುಗಳ ಮಾರಾಟ ನಡೆಯಲಿದೆ.



## ಫಾಸ್ಟ್ ನ್ಯೂಸ್

### ನಾಳೆ ಸರ್ಕಾರಿ ಮುಸ್ಲಿಂ ನೌಕರರ ಸಮ್ಮೇಳನ

» ಚಿತ್ರದುರ್ಗ

ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘ, ಬೆಂಗಳೂರು ಹಾಗೂ ಜಿಲ್ಲಾ ಘಟಕ ಬೆಳಗಾವಿ. ಸಂಯುಕ್ತಾಶ್ರಯದಲ್ಲಿ ಮಾ.3 ರಂದು ಬೆಳಿಗ್ಗೆ 10.15ಕ್ಕೆ ಬೆಳಗಾವಿಯ ಸನ್ಮಾನ ಹೋಟೆಲ್ ಹತ್ತಿರದ ಗಾಂಧಿ ಭವನದಲ್ಲಿ ರಾಜ್ಯ ಮಟ್ಟದ ಸರ್ಕಾರಿ ಮುಸ್ಲಿಂ ನೌಕರರ ಸಮ್ಮೇಳನ, ಅಲ್ಪ ಸಂಖ್ಯಾತರ ಕಲ್ಯಾಣ ಯೋಜನೆ ಹಾಗೂ ಶೈಕ್ಷಣಿಕ, ಔದ್ಯೋಗಿಕ ಯೋಜನೆಗಳ ಅರಿವು ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಎಂದು ಜಿಲ್ಲಾ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯಾಧ್ಯಕ್ಷರು, ಗೌರವಾಧ್ಯಕ್ಷರು, ಖಜಾಂಚಿ ರವರು ಹೇಳಿದರು. ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ಸಮ್ಮೇಳನವನ್ನು ವಿಧಾನ ಸಭೆ ಸಭಾಧ್ಯಕ್ಷರಾದ ಯು.ಟಿ. ಖಾದರ್ ಉದ್ಘಾಟಿಸುವರು. ಶಾಸಕ ಆಸೀಫ್ ಸೇಠ್ ಅಧ್ಯಕ್ಷತೆ ವಹಿಸುವರು. ಸಚಿವರಾದ ಸತೀಶ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳ್ಕರ್, ರಹೀಂ ಖಾನ್, ಜಮೀರ್ ಅಹ್ಮದ್, ಮಧು ಬಂಗಾರಪ್ಪ ಮುಖ್ಯ ಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ನಸೀರ್ ಅಹ್ಮದ್, ಎಂ.ಎಲ್.ಸಿ. ಪ್ರಕಾಶ್ ಹುಕ್ಕೇರಿ, ಶಾಸಕ ತನ್ವೀರ್ ಸೇಠ್, ಖನೀಜ್ ಫಾತಿಮಾ, ಎನ್.ಎ. ಹ್ಯಾರಿಸ್, ರಾಜ್ಯ ಸಭಾ ಸದಸ್ಯ ಡಾ:: ಸೈಯದ್ ನಾಸೀರ್ ಹುಸೇನ್ ಆಗಮಿಸಲಿದ್ದಾರೆ. ಮಧ್ಯಾಹ್ನ 3 ಗಂಟೆಗೆ ಅಲ್ಪ ಸಂಖ್ಯಾತರ ನಿರ್ದೇಶನಾಲಯದ ನಿರ್ದೇಶಕಿ ಜಿಲಾನಿ ಮೊಕಾಶಿ ಮತ್ತು ವಾಣಿಜ್ಯ ತೆರಿಗೆ ಇಲಾಖೆ ಸಹಾಯಕ ಆಯುಕ್ತ ಮೊಹಮ್ಮದ್ ರಫಿ ಪಾಷಾ, ಸರ್ಕಾರಿ ಅಲ್ಪ ಸಂಖ್ಯಾತರ ಕಲ್ಯಾಣ ಯೋಜನೆ ಹಾಗೂ ಶೈಕ್ಷಣಿಕ, ಔದ್ಯೋಗಿಕ ಯೋಜನೆಗಳ ಅರಿವು ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದರು.

### ಭಾರತದಂತಹ ದೇಶಕ್ಕೆ ಕೃತಕ ಬುದ್ಧಿವಂತಿಕೆ ಕೊಡುಗೆ ಅಪಾರ



» ಚಿತ್ರದುರ್ಗ

ಮುಂದಿನ ದಿನಗಳಲ್ಲಿ ಆರ್ಥಿಕವಾಗಿ ಮುಂದುವರಿಯುತ್ತಿರುವ ಭಾರತದಂತಹ ದೇಶಕ್ಕೆ ಕೃತಕ ಬುದ್ಧಿವಂತಿಕೆ ಕೊಡುಗೆ ಅಪಾರ. ಮಾರುಕಟ್ಟೆಯಲ್ಲಿ ಗ್ರಾಹಕರ ಅಭಿರುಚಿ, ವರ್ತನೆ, ಹವ್ಯಾಸಗಳನ್ನು ನಿರ್ಧಾರಿಸಲು ಮತ್ತು ಸಂಸ್ಥೆಯ ಉತ್ಪನ್ನಗಳನ್ನು ತಯಾರು ಮಾಡಲು ಕೃತಕ ಬುದ್ಧಿವಂತಿಕೆ ಹೆಚ್ಚು ಪರಿಣಾಮಕಾರಿ ಎಂದು ದಾವಣಗೆರೆ ವಿಶ್ವವಿದ್ಯಾಲಯದ ಸಹ ಪ್ರಾಧ್ಯಾಪಕ ಡಾ ಸತ್ಯನಾರಾಯಣ ಅಭಿಪ್ರಾಯಪಟ್ಟರು. ಇಲ್ಲಿನ ಸರ್ಕಾರಿ ಕಲಾ ಕಾಲೇಜು (ಸ್ವಾಯತ್ತ) ಸ್ನಾತಕೋತ್ತರ ವಾಣಿಜ್ಯ ಮತ್ತು ಅರ್ಥಶಾಸ್ತ್ರ ವಿಭಾಗದ ವತಿಯಿಂದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಒಂದು ದಿನದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು ಕಾಲೇಜಿನ ಪ್ರಾಂಶುಪಾಲ ಪ್ರೊ. ಬಿ ಟಿ ತಿಪ್ಪೇರುದ್ರಸ್ವಾಮಿ ಮಾತನಾಡಿ, ಪ್ರಸ್ತುತ ಸಂದರ್ಭದಲ್ಲಿ ಕೃತಕ ಬುದ್ಧಿವಂತಿಕೆಯನ್ನು ಹಲವಾರು ಕ್ಷೇತ್ರಗಳಲ್ಲಿ ಉಪಯೋಗಿಸುತ್ತಾರೆ. ಲಭ್ಯವಿರುವ ಸಂಪನ್ಮೂಲಗಳ ಪರಿಪೂರ್ಣ ಬಳಕೆ ಇದು ಹೆಚ್ಚು ಸಹಕಾರಿ ಆಗುತ್ತದೆ ಎಂದು ಅಭಿಪ್ರಾಯಪಟ್ಟರು.ಅಧ್ಯಕ್ಷತೆಯನ್ನು ವಹಿಸಿದ ಪ್ರೊ. ರಾಜಶೇಖರಪ್ಪ ಜಿ.ಎಲ್ ಮಾನವನ ಸಂಬಂಧವನ್ನು ಇನ್ನು ಹತ್ತಿರ ತರಬಲ್ಲ ಸಾಧನವಾಗಿ ಕೃತಕ ಬುದ್ಧಿವಂತಿಕೆಯನ್ನು ಬಳಸಿಕೊಳ್ಳ ಬೇಕು ಎಂದು ಕಾರ್ಯಕ್ರಮ ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು. ಸ್ನಾತಕೋತ್ತರ ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಡಾ.ಲೀಲಾವತಿ ಕೆ ಮತ್ತು ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ ಗಂಗಾಧರ ಆರ್ ಮಾತಾಡಿದರು. ಆಂತರಿಕ ಗುಣಮಟ್ಟ ಕೋಶದ ಸಂಚಾಲಕರಾದ ಪ್ರೊ. ಸುರೇಶ್ ಜಿ ಡಿ, ಪ್ರಾಧ್ಯಾಪಕ ಡಾ ಭಾನುಪ್ರಕಾಶ ಕೆ.ಎ ಉಪಸ್ಥಿತರಿದ್ಧರು. ಡಾ.ಶಿವಕುಮಾರ್ ಬಿ ಸ್ವಾಗತಿಸಿದರು ಕು.ಫಾತಿಮ ಸುಫಿಯ ನಿರೂಪಿಸಿದರು. ಡಾ.ಗಂಗಾಧರ ವಂದಿಸಿದರು

### ಲಿಂಗಾಯಿತ ಸಮಾಜದ ಕ್ರಿಕೆಟ್ ಪಂದ್ಯಾವಳಿ

» ಶಿವಮೊಗ್ಗ

ನೆಹರೂ ರಸ್ತೆಯ ಲ್ಲಿರುವ ಪ್ರತಿಷ್ಠಿತ ಶ್ರೀ ಬಸವೇಶ್ವರ ಸಮಾಜ ಸೇವಾ ಸಂಘದಿಂದ ಮಹಾ ಶಿವರಾತ್ರಿ ನಿಮಿತ್ತ ಸಮಾಜದ ಯುವಕರಿಗಾಗಿ ಬಸವ ಕಪ್ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಯನ್ನು ಮಾ. 3ರ ಬೆಳಿಗ್ಗೆ 7.30ಕ್ಕೆ ಸವಳಂಗ ರಸ್ತೆ ಕೃಷಿ ವಿವಿ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ಸಮಾಜದ ಅಧ್ಯಕ್ಷ ಎಸ್.ಎಸ್. ಜ್ಯೋತಿ ಪ್ರಕಾಶ್ ಕೋರಿದ್ದಾರೆ. ಪಂದ್ಯಾವಳಿಯಲ್ಲಿ ಸಮಾಜದ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಲು ಕಾರ್ಯದರ್ಶಿ ಎಸ್.ಪಿ. ದಿನೇಶ್ ಕೋರಿದ್ದಾರೆ. ಹೆಸರು ನೊಂದಾಯಿ ಸಲು ಬಳ್ಳಕೆರೆ ಸಂತೋಷ್ ಮೊ. 9739454414 ಮತ್ತು ಕಾಯಕ ಯೋಗಿ ಚನ್ನಬಸಪ್ಪ 9632 265141ರಲ್ಲಿ ಸಂಪರ್ಕಿಸಿ.

# ಹೆಲ್ಮೇಟ್ ಧರಿಸಿ ಜೀವ ರಕ್ಷಿಸಿಕೊಳ್ಳಿ: ನೂತನ ಇನ್ಸ್‌ಪೆಕ್ಟರ್ ಕೆ.ಕುಮಾರ್ ಖಡಕ್ ಸೂಚನೆ

» ಚಳ್ಳಕೆರೆ

ಕಳೆದ 2023ರಲ್ಲಿ ಚಳ್ಳಕೆರೆ ಠಾಣಾ ವ್ಯಾಪ್ತಿ ಹೆಲ್ಮೇಟ್ ಧರಿಸದೆ ಒಟ್ಟು 207 ಅಪಘಾತ ಪ್ರಕರಣಗಳಲ್ಲಿ 31 ಜನ ಸಾವಿಗೀಡಾಡಿದ್ದಾರೆ ಎಂದು ನೂತನ ಇನ್ಸ್‌ಪಕ್ಟರ್ ಕೆ.ಕುಮಾರ್ ಹೇಳಿದರು.

ನಗರದ ಅಂಬೇಡ್ಕರ್ ವೃತ್ತದಲ್ಲಿ ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೇಟ್ ಧರಿಸುವಂತೆ ಸೂಚನೆ ನೀಡಿ, ಹೆಲ್ಮೇಟ್ ಇಲ್ಲದೆ ಸಂಭವಿಸಬಹುದಾದ ಜೀವಹಾನಿಯ ಬಗ್ಗೆ ಮಾಹಿತಿ ನೀಡಿದರು.

ಜಿಲ್ಲಾರಕ್ಷಣಾಧಿಕಾರಿಗಳಮಾರ್ಗದರ್ಶನದಂತೆ ಅಪರಾಧ ತಡೆಯುವ ಕಾರ್ಯವನ್ನು ನಿರಂತರವಾಗಿ ಮಾಡಲಾಗುವುದು. ನಮ್ಮ ಠಾಣಾ ವ್ಯಾಪ್ತಿಯ ಪ್ರತಿಯೊಂದು ಗ್ರಾಮದಲ್ಲೂ ಅಧಿಕಾರಿಗಳು ಹಾಗೂ ಸಿಬ್ಬಂದಿ ಕರಪತ್ರದ ಮೂಲಕ ಅಪರಾಧ ತಡೆ, ಹೆಲ್ಮೇಟ್ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡಲಾಗುತ್ತದೆ. ನಮ್ಮಉದ್ದೇಶ ಜನರಿಗೆ ತೊಂದರೆ ಕೊಡುವುದಲ್ಲ, ಬದಲಾಗಿ ಅವರ ಬದುಕು, ಜೀವ ರಕ್ಷಿಸುವುದಾಗಿದೆ. ದ್ವಿಚಕ್ರವಾಹನ ಸವಾರರು ಕಡ್ಡಾಯವಾಗಿ ಹೆಲ್ಮೇಟ್ ಧರಿಸಿ ಸಂಚರಿಸಿದರೆ ಸಾವುಗಳನ್ನು ನಿಯಂತ್ರಿಸಬಹುದು. ಈ ಹಿನ್ನೆಲೆಯಲ್ಲಿ ಸವಾರರಿಗೆ ಪ್ರಾರಂಭದಲ್ಲಿ ವಿನಂತಿ ಮತ್ತು ಮನವಿ ಮಾಡಿ ಅವರ ಮನವಲಿಸುವ ಕಾರ್ಯ ಮಾಡಿದೆ ಪುನಃ ಹೆಲ್ಮೇಟ್ ದರಿಸದೆ ವಾಹನ ಚಲಾಯಿಸಿದರೆ ದಂಡವಿಧಿಸಿ ಕಾನೂನು ಕ್ರಮ ಜರುಗಿಸುವ ಎಚ್ಚರಿಕೆ ನೀಡಿದ್ದಾರೆ.

ಹೆಲ್ಮೇಟ್ ಧರಿಸದೆರಸ್ತೆಗೆಬರುವ ಸಣ್ಣತಪ್ಪಿನಿಂದ ನಿಮ್ಮ ಇಡೀ ಸಂಸಾರ ಬೀದಿಪಾಲಾಗುತ್ತದೆ. ಸರ್ಕಾರ ಹೆಲ್ಮೇಟ್ ಕಡ್ಡಾಯಗೊಳಿಸಿ ಆದೇಶ ನೀಡಿದ್ದರೂ ಸಹ ಇದನ್ನು ಪರಿಪಾಲಿಸದೆ ಪ್ರಾಣವನ್ನು ಕಳೆದುಕೊಳ್ಳುವವರ ಸಂಖ್ಯೆ ಹೆಚ್ಚಾಗುತ್ತಿದೆ. ಈ ಹಿನ್ನೆಲೆಯಲ್ಲಿ ಹೆಲ್ಮೇಟ್ ಧರಿಸಿ ದ್ವಿಚಕ್ರವಾಹನ ಚಾಲನೆ ಮಾಡದಂತೆ ಮನವಿ ಮಾಡಿದರು. ನಗರ ವ್ಯಾಪ್ತಿಯಲ್ಲಿ ಅಪರಾಧ ಪ್ರಕರಣ ತಡೆಯುವ ನಿಟ್ಟಿನಲ್ಲಿ, ಕಾನೂನು ಪಾಲನೆ ಮಾಡದೆ ಇರುವವರ ಮೇಲೆ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದರು.



# ಚಿತ್ರದುರ್ಗ ನಗರಾಭೀವೃದ್ಧಿ ಪ್ರಾಧಿಕಾರದ ನೂತನ ಅಧ್ಯಕ್ಷರಾಗಿ ತಾಜ್‌ಪೀರ್ ಅಧಿಕಾರ ಸ್ವೀಕಾರ



» ಚಿತ್ರದುರ್ಗ

ಚಿತ್ರದುರ್ಗ ನಗರಾಭೀವೃದ್ಧಿ ಪ್ರಾಧಿಕಾರದ ನೂತನ ಅಧ್ಯಕ್ಷರಾಗಿ ಎಂ.ಕೆ.ತಾಜ್‌ಪೀರ್ ಇಂದು ಮಧ್ಯಾಹ್ನ ಪ್ರಾಧಿಕಾರದ ಅವರಣದಲ್ಲಿ ಅಧ್ಯಕ್ಷರಾಗಿ ಅಧಿಕಾರವನ್ನು ಸ್ವೀಕಾರ ಮಾಡಿದರು.

ಈ ಸಂಧರ್ಬದಲ್ಲಿ ಮಾತನಾಡಿದ ಅವರು ಪಕ್ಷ ಅಧಿಕಾರಕ್ಕ ಬಂದ ನಂತರ ಪಕ್ಷದ ಕಾರ್ಯಕರ್ತರಿಗೆ ಜವಾಬ್ದಾರಿಯನ್ನು ನೀಡಬೇಕೆಂದು ಮಾತನ್ನು ನೀಡಿದ್ದರು ಅದರಂತೆ ಇಂದು ಪಕ್ಷದ ಕಾರ್ಯಕರ್ತನಾದ ನನಗೆ ಈ ಸ್ಥಾನವನ್ನು ನೀಡಿದ್ದಾರೆ. ಬೇರೆ ಬೇರೆ ಜಿಲ್ಲೆಯಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರನ್ನು ಅಧಿಕಾರವನ್ನು ನೀಡಿದ್ದಾರೆ. ಅದರಂತೆ ನನಗೆ ಚಿತ್ರದುರ್ಗದಲ್ಲಿ ಚಿತ್ರದುರ್ಗ ನಗರಾಭೀವೃದ್ಧಿ ಪ್ರಾಧಿಕಾರದ ಅಧ್ಯಕ್ಷನಾಗಿ ಸೇವೆಯನ್ನು ಸಲ್ಲಿಸಲು ಅವಕಾಶವನ್ನು ಕಲ್ಪಿಸಲಾಗಿದೆ. ಜವಾಬ್ದಾರಿಯನ್ನು ನೀಡಿದ್ದಾರೆ ಇದು ನನಗೆ ಹಿರಿಯ ಪುಣ್ಯದ ಫಲವಾಗಿದೆ. ಜವಾಬ್ದಾರಿಯನ್ನು ಉತ್ಸಾಹ, ಗೌರವದಿಂದ ನಿಮ್ಮಗಳ ಪ್ರೀತಿಯಿಂದ ನಿರ್ವಹಿಸುತ್ತೇನೆ ಎಂದರು.

## ಪ್ರಮುಖ ಸುದ್ದಿ

# ಸಾಣಿಕೆರೆಯಲ್ಲಿ ಒಣಬೇಸಾಯ ಕೃಷಿ ಸಂಶೋಧನಾ ಕೇಂದ್ರಕ್ಕೆ ಅಧಿವೇಶನದಲ್ಲಿ ಒತ್ತಾಯಿಸಿದ ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ

ಬಹಳ ವರ್ಷಗಳಿಂದ ಈ ಭಾಗದ ರೈತರ ಸರ್ವತೋಮುಖ ಅಭಿವೃದ್ದಿ ಹಾಗೂ ಎಸ್ಸಿ, ಎಸ್ಟಿ ಜನಾಂಗದ ರೈತರ ಅಭಿವೃದ್ಧಿ ಹಿನ್ನಲೆಯಲ್ಲಿ ಒಣಬೇಸಾಯ ಕೃಷಿ ಪದ್ದತಿಯನ್ನು ಆರಂಭಿಸಲು ಕೃಷಿ ಸಂಶೋಧನಾ ಕೇಂದ್ರವನ್ನು ತಾಲ್ಲೂಕಿನ ಸಾಣಿಕೆರೆ ಗ್ರಾಮದಲ್ಲಿ ಪ್ರಾರಂಭಿಸುವಂತೆ ಕ್ಷೇತ್ರದ ಶಾಸಕ, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಮಂಡಳಿ ಅಧ್ಯಕ್ಷಟಿ.ರಘುಮೂರ್ತಿ ವಿಧಾನಸೌಧ ಅಧಿವೇಶನದಲ್ಲಿ ಕೃಷಿ ಸಚಿವ ಕೃಷ್ಣಭೈರೇಗೌಡರವರನ್ನು ಜಮೀನು ಮಂಜೂರಾಗಿದ್ದು, ಹಣ ಬಿಡುಗಡೆ ಮಾಡಿಸಿಕೊಡುವಂತೆ ವಿನಂತಿಸಿರುತ್ತಾರೆ.

ವಿಧಾನಸೌಧ ಅಧಿವೇಶನದಲ್ಲಿ ಗಮನಸೆಳೆಯುವ ಸೂಚನೆ 73ರ ಅಡಿಯಲ್ಲಿ ಶಾಸಕರು ಈ ಬಗ್ಗೆ ಕೃಷಿ ಸಚಿವರನ್ನು ಪ್ರಶ್ನಿಸಿ, ಈಹಿಂದೆಯೇ ಸಾಣಿಕೆರೆ ಗ್ರಾಮದ ರಿ.ಸರ್ವೆ ನಂ. 48ರ ಒಟ್ಟು 95.13 ಎಕರೆ ಸರ್ಕಾರಿ ಗೋಮಾಳವಿದ್ದು, ಆಪೈಕಿ 92 ಎಕರೆ ಸರ್ಕಾರಿ ಗೋಮಾಳದಲ್ಲಿ ಒಣಬೇಸಾಯ ಕೃಷಿ ಸಂಶೋಧನಾ ಕೇಂದ್ರ ಹಾಗೂ ಕೃಷಿ ವಿಶ್ವವಿದ್ಯಾಲಯ ಬಲವರ್ಧನೆ ಹಿನ್ನಲೆಯಲ್ಲಿ ಅನೇಕ ಸಂಶೋಧನೆಗಳನ್ನು ಒಣಬೇಸಾಯ ಕೃಷಿ ಪದ್ದತಿಯಲ್ಲಿ ನಡೆಸಲು ಅನುಕೂಲವಾಗುವಂತೆ ಸರ್ಕಾರ ಕೃಷಿ ಸಂಶೋಧನಾ ಕೇಂದ್ರವನ್ನು ಸ್ಥಾಪಿಸಲು ಅನುಮತಿ ನೀಡಬೇಕಲ್ಲದೆ, ಸರ್ಕಾರ 92 ಎಕರೆ ಜಮೀನನ್ನು ಕೃಷಿ ವಿಶ್ವವಿದ್ಯಾಲಯಕ್ಕೂ ಹಸ್ತಾಂತರಿಸಲು ಅವಕಾಶ ಮಾಡಿಕೊಡಬೇಕೆಂದು ಮನವಿ ಮಾಡಿದರು.

ವಿಷಯಕ್ಕೆ ಸಂಬಂಧಪಟ್ಟಂತೆ ಮಾಹಿತಿ ನೀಡಿದ ಶಾಸಕ ಟಿ.ರಘುಮೂರ್ತಿ ಈ ಹಿಂದೆ ಕಾಂಗ್ರೆಸ್, ಜೆಡಿಎಸ್ ಸಮಿಶ್ರ ಸರ್ಕಾರದಲ್ಲಿ ಕೃಷಿ ಸಚಿವರಾಗಿದ್ದ ಗುಬ್ಬಿಶ್ರೀನಿವಾಸ್ ಭೇಟಿ ನೀಡಿ ಪರಿಶೀಲನೆ ನಡೆಸಿ ಅಂದೇ ಕೃಷಿ ಮತ್ತು ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿ ಸರ್ಕಾರ ಗೋಮಾಳ ಕೃಷಿ ಸಂಶೋಧನಾ ಕೇಂದ್ರಕ್ಕೆ ಮಂಜೂರಾತಿ ಹಿನ್ನಲೆಯಲ್ಲಿ ಕೂಡಲೇ ಅಗತ್ಯ ಕ್ರಮ ಕೈಗೊಳ್ಳುವಂತೆ ಶಿಫಾರಸ್ಸು ಮಾಡಬೇಕೆಂದು ಮೌಖಿಕ ಸೂಚನೆ ನೀಡಿದ್ದರು. ಅವರೂ ಸಹ ಸಾಕಷ್ಟು ಬಾರಿ ಈ ಬಗ್ಗೆ ಉತ್ಸಾಹ ತೋರಿದ್ದರೂ ಜಮೀನು ಮಂಜುರಾತಿ, ಹಣವೂ ಬಿಡುಗಡೆಯಾಗಲಿಲ್ಲ. ಕೃಷಿ ಸಚಿವರು ಈ ಬಾರಿಯಾದರೂ ನಮ್ಮ ಕ್ಷೇತ್ರದ ಪ್ರಮುಖ ಭೇಡಿಕೆಯನ್ನು ಈಡೇರಿಸುವಂತೆ ಹೆಚ್ಚು ಗಮನ ಹರಿಸುವಂತೆ ಮನವಿ ಮಾಡಿದರು.

ಕೃಷಿ ಸಚಿವ ಕೃಷ್ಣಬೈರೇಗೌಡ ಶಾಸಕ ಟಿ.ರಘುಮೂರ್ತಿಯವರ ಒಣಬೇಸಾಯ ಪದ್ಧತಿ ಬಲವರ್ಧನೆ ಹಾಗೂ ಕೃಷಿ ಸಂಶೋಧನಾ ಕೇಂದ್ರಕ್ಕೆ ಜಮೀನು ಮಂಜೂರು ಮಾಡಿದ ಬಗ್ಗೆ ವಿಷಯ ಪ್ರಸ್ತಾಪಿಸಿದ್ದಕ್ಕೆ ರೈತರ ಪರವಾಗಿ ಶಾಸಕರಿಗೆ ಇರುವ ಆಸಕ್ತಿಗೆ ಪ್ರಶಂಸೆ ವ್ಯಕ್ತಪಡಿಸಿ ಕೃಷಿ ಸಂಶೋಧನಾ ಕೇಂದ್ರ ಸ್ಥಾಪನೆ ಕುರಿತಂತೆ ಸರ್ಕಾರ ಮಟ್ಟದಲ್ಲಿ ಹೆಚ್ಚುವರಿ ಮುಖ್ಯಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ನೇತೃತ್ವದಲ್ಲಿ ಪರಿಣಿತ ತಂಡವನ್ನು ರಚಿಸಿ ಸರ್ಕಾರಕ್ಕೆ ಶಿಫಾರಸ್ಸು ಮಾಡುವ ಕುರಿತು ಶಿವಮೊಗ್ಗದ ಕೆಳದಿಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನ ವಿಶ್ವವಿದ್ಯಾಲಯಕ್ಕೆ ಸೂಚಿಸಿದ್ದು, ಅವರು ಸಹ ಸದರಿ 92 ಎಕರೆ ಜಮೀನನ್ನು ವಿಶೇಷ ಶೇ.50ರ ಸಬ್ಸಿಡಿಯಡಿಯಲ್ಲಿ ಒಟ್ಟು 27 ಕೋಟಿ ಹಣ ನೀಡುವಂತೆ ಶಿಫಾರಸ್ಸು ಮಾಡಿದ್ದು, ಈ ಸಂಪೂರ್ಣ ಮಾಹಿತಿ ಪರಿಣಿತ ತಂಡದ ಪರಿಶೀಲನೆಯಲ್ಲಿದೆ ಎಂದುತಿಳಿಸಿದರು.



Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T